## ನಕಲಿ ನಂಬರ್ ಪ್ಲೇಟ್, ಆರ್‌ಸಿ ಕಾರ್ಡ್ ಸೃಷ್ಟಿಸಿ ಅಡವಿಟ್ಟ ಕಾರುಗಳ ಮಾರಾಟ! ನಾಲ್ವರು ಸೆರೆ

• ಉದಯವಾಹಿನಿ, ಬೆಂಗಳೂರು

ಕಾರುಗಳಿಗೆ ನಕಲಿ ನಂಬರ್ ಪ್ಲೇಟ್ ಹಾಗೂ ಆರ್‌ಸಿ ಕಾರ್ಡ್‌ಗಳನ್ನು ಸೃಷ್ಟಿಸಿ ಮಾರಾಟ ಮಾಡಿ ವಂಚಿಸುತ್ತಿದ್ದ ನಾಲ್ವರು ಆರೋಪಿಗಳನ್ನು ಆಡುಗೋಡಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಪ್ರಭಾಕರ್, ವೇಣುಗೌಡ, ಪ್ರಶಾಂತ್ ಹಾಗೂ ಭಾಗೇಶ್ ಬಂಧಿತ ಆರೋಪಿಗಳು. ಇವರಿಂದ ಒಟ್ಟು 1.74 ಕೋಟಿ ರೂಪಾಯಿ ಮೌಲ್ಯದ 8 ವಿವಿಧ ಕಾರುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕಾರು ಮಾರಾಟ ಮಾಡಿಸುವ ಮಧ್ಯವರ್ತಿಗಳಾಗಿ ಕೆಲಸ ಮಾಡುತ್ತಿದ್ದ ಈ ಆರೋಪಿಗಳು, ತುರ್ತು ಹಣದ ಅಗತ್ಯಕ್ಕಾಗಿ ದುಬಾರಿ ಕಾರುಗಳನ್ನು ಅಡವಿಡಲು ಬಯಸುವವರನ್ನು ಟಾರ್ಗೆಟ್ ಮಾಡುತ್ತಿದ್ದರು. ಮೂಲ ಮಾಲೀಕರು ಕಾರು ಅಡವಿಟ್ಟ ತಕ್ಷಣ ಆರೋಪಿಗಳು ತಾವೇ ಆ ಕಾರಿನ ಮಾಲೀಕರು ಎಂಬಂತೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ನಂಬರ್ ಪ್ಲೇಟ್ ಬದಲಿಸುತ್ತಿದ್ದರು. ಬಳಿಕ, ಬೇರೊಬ್ಬ ಡೀಲರ್ ಬಳಿ ತೆರಳಿ ಅದೇ ಕಾರನ್ನು ಹೆಚ್ಚಿನ ಲಾಭಾಂಶ ಬರುವಂತೆ ಮತ್ತೆ ಅಡಮಾನ ಇಡುತ್ತಿದ್ದರು. ಬಂದ ಹಣದಲ್ಲಿ ಮೊದಲಿನ ಸಾಲದ ಹಣ ತೀರಿಸಿ, ಕಾರು ಬಿಡಿಸಿಕೊಂಡು ಹೋಗಿ ಇನ್ನೊಬ್ಬರಿಗೆ ಅಡ ಇಡುವುದು ಅಥವಾ ಮಾರಾಟ ಮಾಡುವುದನ್ನೇ ಕಾಯಕವನ್ನಾಗಿಸಿಕೊಂಡಿದ್ದರು. ಎಲೆಕ್ಟ್ರಾನಿಕ್ ಸಿಟಿಯ ನಿವಾಸಿಯೊಬ್ಬರ ಕಾರಿನ ಲೋನ್ ಹಣವನ್ನು ತಾವೇ ಪಾವತಿಸುವುದಾಗಿ ನಂಬಿಸಿದ್ದ ವಂಚಕರು, ಬಳಿಕ ಲೋನ್ ಕಟ್ಟದೆ, ಕಾರನ್ನೂ ವಾಪಸ್ ನೀಡದೆ ಮೋಸ ಮಾಡಿದ್ದರು. ಈ ಕುರಿತು ಕಾರಿನ ಮಾಲೀಕರು ಜುಲೈ 13ರಂದು ಆಡುಗೋಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

## ಅಕ್ರಮ ತಡೆಯಲು ಹದ್ದಿನ ಕಣ್ಣಿಟ್ಟಿರುವ ಪೊಲೀಸ್ ಇಲಾಖೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರಾಜ್ಯ ಪೊಲೀಸ್ ಇಲಾಖೆಯ 3,991 ಪೊಲೀಸ್ ಕಾನ್ಸ್‌ಟೇಬಲ್‌ಗಳ ಹುದ್ದೆಗಳಿಗೆ ಲಿಖಿತ ಪರೀಕ್ಷೆ ಆಗಸ್ಟ್ 2ರಂದು ನಡೆಯಲಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ವತಿಯಿಂದ ನಡೆಯುತ್ತಿರುವ ಪರೀಕ್ಷೆಗೆ ಸಕಲ ಸಿದ್ದತೆ ಕೈಗೊಂಡಿದೆ.2021ರಲ್ಲಿ ನಡೆದಿದ್ದ 545 ಪಿಎಸ್‌ಐ ಪರೀಕ್ಷೆಯಲ್ಲಿ ನಡೆದಿದ್ದ ಹಗರಣ ಬಳಿಕ ಎಚ್ಚೆತ್ತುಕೊಂಡಿರುವ ರಾಜ್ಯ ಸರ್ಕಾರವು ಈ ಹಿಂದೆ ನಡೆದ ವಿವಿಧ ವೃಂದದ ಪೊಲೀಸ್ ಹುದ್ದೆಗಳ ಪರೀಕ್ಷೆ ನಿರ್ವಹಣೆ ಜವಾಬ್ದಾರಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ (ಕೆಇಎ)ಗೆ ವಹಿಸಿದೆ. ಅದರಂತೆ ಕೆಇಎ ರಾಜ್ಯದ ವಿವಿಧ ಜಿಲ್ಲಾ, ನಗರ ಘಟಕಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ಆಗಸ್ಟ್ 2ರಂದು ಲಿಖಿತ ಪರೀಕ್ಷೆ ನಡೆಯಲಿದೆ. ಹುದ್ದೆಗಳ ವಿವರ: ಒಟ್ಟು ಹುದ್ದೆ 3,991. ಇದರಲ್ಲಿ ಕಲ್ಯಾಣ ಕರ್ನಾಟಕ ಅಭ್ಯರ್ಥಿಗಳಿಗೆ 596 ಹುದ್ದೆ ಮೀಸಲಾಗಿದೆ. ಪುರುಷ ಅಭ್ಯರ್ಥಿಗಳಿಗೆ 2266, ಮಹಿಳಾ ಅಭ್ಯರ್ಥಿಗಳಿಗೆ 755, ಸೇವಾನಿರತ ಪುರುಷರಿಗೆ 257, ಸೇವಾನಿರತ ಮಹಿಳೆಯರಿಗೆ 82 ಹಾಗೂ ತೃತೀಯ ಲಿಂಗಿ ಅಭ್ಯರ್ಥಿಗಳಿಗೆ 35 ಹುದ್ದೆಗಳನ್ನು ಕಾಯ್ದಿರಿಸಲಾಗಿದೆ.ಪಾರದರ್ಶಕ ಪರೀಕ್ಷೆಗೆ ಚಿಂತನೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಈ ಬಾರಿ ಪಾರದರ್ಶಕ ಪರೀಕ್ಷೆ ನಡೆಸಲು ಇಲಾಖೆ ಸಿದ್ದತೆಗಳನ್ನ ಮಾಡಿಕೊಂಡಿದೆ. ಪರೀಕ್ಷಾ ಅಕ್ರಮದಲ್ಲಿ ಭಾಗಿಯಾಗುವವರ ಮೇಲೆ ಹದ್ದಿನ ಕಣ್ಣಿಡಲಾಗಿದೆ. ಈಗಾಗಲೇ ಸಂಚಿನಲ್ಲಿ ಭಾಗಿಯಾಗಿದ್ದವರ ಮೇಲೆ ಪೊಲೀಸರು ನಿಗಾ ವಹಿಸಿದ್ದಾರೆ. ಇನ್ನು ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್, ಕೆಎಸ್‌ಆರ್ ಪಿ ಹಾಗೂ ಕೆಎಸ್‌ಐಎಸ್ ಎಫ್ ಹುದ್ದೆಗಳಿಗಾಗಿ ಪರೀಕ್ಷೆಗಳು ನಡೆದಿದೆ. ಒಟ್ಟು ಆಗಸ್ಟ್ ಹಾಗೂ ಸೆಪ್ಟೆಂಬರ್‌ನಲ್ಲಿ ಪೊಲೀಸ್ ಇಲಾಖೆಯ ವಿವಿಧ ವೃಂದಗಳ ಹುದ್ದೆಗಳಿಗೆ ಪರೀಕ್ಷೆಗಳು ನಡೆಯಲಿದೆ.

## ಕೆಪಿಎಸ್‌ಸಿ ಉದ್ಯೋಗಾಕಾಂಕ್ಷಿಗಳ ಹೋರಾಟಕ್ಕೆ ಬಿಜೆಪಿ ಸದಾ ಬೆಂಬಲ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ



ಕೆಪಿಎಸ್‌ಸಿ ಉದ್ಯೋಗಾಕಾಂಕ್ಷಿಗಳ ಹೋರಾಟದಲ್ಲಿ ಬಿಜೆಪಿ ಸದಾ ಪಾಲ್ಗೊಂಡಿದೆ. ಇನ್ನು ಮುಂದೆಯೂ ಹೋರಾಟಕ್ಕೆ ಬೆಂಬಲ ನೀಡಲಿದ್ದೇವೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಮಂಗಳವಾರ ಕೆಪಿಎಸ್‌ಸಿ ಉದ್ಯೋಗಾಕಾಂಕ್ಷಿಗಳು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹಿಂದೆ ತರ್ಜುಮೆ ಮಾಡಿದ ಅರ್ಥಹೀನ ಪ್ರಶ್ನೆಗಳನ್ನು ಕೇಳಲಾಗಿತ್ತು. ಆದರೂ ಪರೀಕ್ಷೆ ಮಾಡಿ ಆಯ್ಕೆ ಮಾಡಿದ್ದಾರೆ. ಎಂಥ ಸರ್ಕಾರ ಇದು ಎಂದು ಆರೋಪಿಸಿದರು.

ಆರ್. ಅಶೋಕ್ ಮತ್ತು ನಾನು ಕೆಪಿಎಸ್‌ಸಿ ಲಂಚಾವತಾರದ ಸಂಬಂಧ ಪ್ರಮುಖ ಅಧಿಕಾರಿಗಳನ್ನು ಭೇಟಿ ಮಾಡಿದ್ದೇವೆ. ತಕ್ಷಣ ಈ ಕೇಸನ್ನು ಸಿಬಿಐಗೆ ಕೊಡಬೇಕೆಂದು ಹೇಳಿರುವುದಾಗಿ ತಿಳಿಸಿದರು. ಇದು ಲಂಚಪ್ರಿಯ ಮತ್ತು ಭೂಮಿಪ್ರಿಯ ಸರ್ಕಾರ ಎಂದು ಟೀಕಿಸಿದ ಅವರು, ಮೊದಲು ವಿದ್ಯೆಯ ಮಾರಾಟ ಆಗುತ್ತಿತ್ತು. ಈಗ ಅದರ ಜತೆ ಹುದ್ದೆಗಳ ಮಾರಾಟ ಆಗುತ್ತಿದೆ ಎಂದು ದೂರಿದರು. ಸದಾ ನಿಮ್ಮ ಜತೆ ನಾವಿದ್ದೇವೆ. ಭ್ರಷ್ಟಾಚಾರವನ್ನು ಬೇರುಸಮೇತ ಕಿತ್ತು ಹಾಕಬೇಕಿದೆ. ಲೋಕಸೇವಾ ಆಯೋಗದಲ್ಲಿ ಸೇವೆ ಎಂಬುದೇ ಇಲ್ಲ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು. ಪರೀಕ್ಷೆಗಳಲ್ಲಿ ಹಣ ಪಡೆದು ಅನರ್ಹ ಅಭ್ಯರ್ಥಿಗಳಿಗೆ ಸರ್ಕಾರಿ ಉದ್ಯೋಗ ಕಲ್ಪಿಸುವ ವ್ಯವಸ್ಥೆ ರೂಪುಗೊಂಡಿದ್ದು, ಅರ್ಹ ಅಭ್ಯರ್ಥಿಗಳ ಭವಿಷ್ಯವನ್ನು ಕಸಿದುಕೊಳ್ಳುವ ಕೆಲಸ ನಡೆಯುತ್ತಿದೆ. ಈ ಮೂಲಕ ಸರ್ಕಾರಿ ನೇಮಕಾತಿ ವ್ಯವಸ್ಥೆಯ ಮೇಲಿನ ಜನರ ವಿಶ್ವಾಸವೇ ಕುಸಿಯುವಂತಾಗಿದೆ ಎಂದು ದೂರಿದರು.

## ದುರಂತವನ್ನೇ ಸೋಲಿಸಿ ಚೊಚ್ಚಲ ಪ್ರಯತ್ನದಲ್ಲೇ ಕಾಮನ್‌ವೆಲ್ತ್ ಪದಕ ಗೆದ್ದ ಕನ್ನಡತಿ ಶಿಲ್ಪಾ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಗ್ಲಾಸ್ಗೋದಲ್ಲಿ ನಡೆಯುತ್ತಿರುವ ಕಾಮನ್‌ವೆಲ್ತ್ ಕ್ರೀಡಾಕೂಟದ ಮಹಿಳೆಯರ ಶಾಟ್‌ಪುಟ್ 57 ಫೈನಲ್‌ನಲ್ಲಿ ಮೈಸೂರಿನ ಕೆ.ಎಸ್. ಶಿಲ್ಪಾ, ಎಲ್ಲಾ ಅಡೆತಡೆಗಳನ್ನು ಮೀರಿ ಚೊಚ್ಚಲ ಪ್ರಯತ್ನದಲ್ಲೇ ಕಂಚಿನ ಪದಕ ಗೆದ್ದು ದೇಶ ಮತ್ತು ರಾಜ್ಯ ಹೆಮ್ಮೆಪಡುವಂತೆ ಮಾಡಿದ್ದಾರೆ. ಇದೇ ವಿಭಾಗದಲ್ಲಿ 40 ವರ್ಷದ ಶರ್ಮಿಳಾ ಧಂಕರ್ ಐತಿಹಾಸಿಕ ಚಿನ್ನ ಗೆದ್ದ ಸಾಧನೆ ಮಾಡಿದರು.


ಆರಂಭದಲ್ಲಿ ಕೆ.ಎಸ್. ಶಿಲ್ಪಾ ಪದಕಗಳಿಂದ ಹೊರಗುಳಿದ ನಂತರ ನಾಟಕೀಯ ತಿರುವು ಪಡೆಯಿತು. ಭಾರತೀಯ ತಂಡದ ಯಶಸ್ವಿ ಪ್ರತಿಭಟನೆಯ ನಂತರ ಅವರು ಕಂಚಿಗೆ ಬಡ್ತಿ ಪಡೆದರು. ಶಿಲ್ಪಾ ಫೈನಲ್‌ನಲ್ಲಿ ವೈಯಕ್ತಿಕ ಅತ್ಯುತ್ತಮ ಎಸೆತ 7.26 ಮೀಟರ್ ದಾಖಲಿಸಿದರು ಮತ್ತು ನೈಜೀರಿಯಾದ ಯುಚಾರಿಯಾ ಇಯಾಜಿ ಸಮೀಕರಣವನ್ನು ಪ್ರವೇಶಿಸುವ ಮೊದಲು ಪದಕ ಸ್ಥಾನದಲ್ಲಿ ಕುಳಿತಿದ್ದರು. ಹಾಲಿ ಕಾಮನ್‌ವೆಲ್ತ್ ಕ್ರೀಡಾಕೂಟದ ಚಾಂಪಿಯನ್ ಮತ್ತು ಬಹು ಪ್ಯಾರಾಲಿಂಪಿಕ್ ಪದಕ ವಿಜೇತೆ ಇಯಾಜಿ 8.19 ಮೀಟರ್ ಪ್ರಯತ್ನವನ್ನು ಆರಂಭದಲ್ಲಿ ಮಾನ್ಯವೆಂದು ಘೋಷಿಸಲಾಯಿತು. ಆ ಅಂಕವು ಇಯಾಜಿಯನ್ನು ಮೂರನೇ ಸ್ಥಾನಕ್ಕೆ ತಳ್ಳಿತು ಮತ್ತು ಶಿಲ್ಪಾ ಅವರನ್ನು ನಾಲ್ಕನೇ ಸ್ಥಾನಕ್ಕೆ ತಳ್ಳಿತು. ಆದರೆ ಇಯಾಜಿಯವರ 8.19 ಮೀ ಪ್ರಯತ್ನದ ವಿರುದ್ಧ ಭಾರತವು ಔಪಚಾರಿಕ ಪ್ರತಿಭಟನೆಯನ್ನು ಸಲ್ಲಿಸಿತು. ಇದರಿಂದಾಗಿ ಅಧಿಕಾರಿಗಳು ನೈಜೀರಿಯಾದ ಅಥ್ಲೀಟ್‌ನ ಎಸೆತವನ್ನು ಪರಿಶೀಲಿಸಲು ಪ್ರೇರೇಪಿಸಿದರು. ಪರಿಶೀಲನೆಯ ನಂತರ, ನಿರ್ಧಾರವನ್ನು ರದ್ದುಗೊಳಿಸಲಾಯಿತು ಮತ್ತು ಪ್ರಯತ್ನವನ್ನು ಫೌಲ್ ಎಂದು ಘೋಷಿಸಲಾಯಿತು. ಬಹುಮುಖ್ಯವಾಗಿ, 8.19 ಮೀ ಪ್ರಯತ್ನವು ಆರಂಭದಲ್ಲಿ ಮಾನ್ಯವೆಂದು ಪರಿಗಣಿಸಲಾದ ಇಯಾಜಿಯ ಏಕೈಕ ಥ್ರೋ ಆಗಿತ್ತು. ಒಮ್ಮೆ ಅದನ್ನು ಅವರ ದಾಖಲೆಯಿಂದ ತೆಗೆದುಹಾಕಿದ ನಂತರ, ಅವರು ಸ್ಪರ್ಧೆಯಲ್ಲಿ ಮಾನ್ಯ ಅಂಕವನ್ನು ಪಡೆಯಲಿಲ್ಲ. ಅದು ಸ್ವಯಂಚಾಲಿತವಾಗಿ ಶಿಲ್ಪಾ ಅವರ 7.26 ಮೀ ಪ್ರಯತ್ನವನ್ನು ಮೂರನೇ ಸ್ಥಾನಕ್ಕೆ ಹಿಂತಿರುಗಿಸಿತು ಮತ್ತು ಭಾರತೀಯ ಆಟಗಾರ್ತಿಯನ್ನು ನಾಲ್ಕನೇ ಸ್ಥಾನದಿಂದ ಕಂಚಿನ ಪದಕ ಸ್ಥಾನಕ್ಕೆ ಏರಿಸಿತು.

# ವಿಬಿ-ಜಿ-ರಾಮ್ ಜಿ ಯೋಜನೆಗೆ ಹಣದ ಕೊರತೆಯಿಲ್ಲ

## ಗ್ರಾಮೀಣ ಉದ್ಯೋಗಕ್ಕೆ 2,900 ಕೋಟಿ ರೂ. ಬಿಡುಗಡೆ: ರಾಜ್ಯ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗ ಸೃಷ್ಟಿಸುವ ಉದ್ದೇಶದಿಂದ ಜಾರಿಗೊಂಡಿರುವ ವಿಬಿ-ಜಿ-ರಾಮ್ ಜಿ ಯೋಜನೆ ಅನುಷ್ಠಾನಕ್ಕೆ ಯಾವುದೇ ಹಣದ ಕೊರತೆಯಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಅವರು ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜುಲೈ 1ರಿಂದ ಯೋಜನೆ ಜಾರಿಯಲ್ಲಿದ್ದು, ಮೊದಲ ತ್ರೈಮಾಸಿಕಕ್ಕೆ ಒಟ್ಟು 2,900 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.ಈ ಪೈಕಿ ಕೇಂದ್ರ ಸರ್ಕಾರವು 60:40 ಅನುದಾನ ಅನುಪಾತದಡಿ ರೂ.1,700 ಕೋಟಿ ಬಿಡುಗಡೆ ಮಾಡಿದ್ದು, ರಾಜ್ಯ ಸರ್ಕಾರ ರೂ.1,200 ಕೋಟಿ ನೀಡಿದೆ. ಈ ಅನುದಾನದಿಂದ ಪ್ರತಿ ತಿಂಗಳು 5 ಲಕ್ಷ ಗ್ರಾಮೀಣ ಜನರಿಗೆ ಉದ್ಯೋಗ ಕಲ್ಪಿಸಿ, 1.5 ಕೋಟಿ ಮಾನವ ದಿನಗಳ ಉದ್ಯೋಗ ಸೃಷ್ಟಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.



1 ವಿಬಿಜಿ ರಾಮ್ ಜಿ ಯೋಜನೆ ಜಾರಿಗೆ ಹಣಕಾಸು ಕೊರತೆ ಇಲ್ಲ

2 ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟನೆ

3 1.5 ಕೋಟಿ ಮಾನವದಿನ ಉದ್ಯೋಗ ಸೃಷ್ಟಿ ಮಾಡುವಷ್ಟು

ಯೋಜನೆಯಡಿ ಕೃಷಿ ಬಾವಿ ನಿರ್ಮಾಣ, ಹನಿ ನೀರಾವರಿ, ಕೆರೆ ಕಾಲುವೆಗಳ ಅಭಿವೃದ್ಧಿ, ಚೆಕ್‌ಡ್ಯಾಂ ನಿರ್ಮಾಣ ಸೇರಿದಂತೆ ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿದೆ. ಕೆಲಸ ಕೇಳುವ ಪ್ರತಿಯೊಬ್ಬರಿಗೂ ಉದ್ಯೋಗ ನೀಡುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು (ಸಿಇಒ) ಹಾಗೂ ಗ್ರಾಮ ಮಟ್ಟದ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಪರ್ಯಾಯ ನೀರಿನ ಮೂಲ ಗುರುತಿಸಲು ಸೂಚನೆ ಸಾಂಪ್ರದಾಯಿಕ ನೀರಿನ ಮೂಲಗಳು ಬತ್ತಿರುವ ಗ್ರಾಮ ಪಂಚಾಯಿತಿಗಳಲ್ಲಿ ಪರ್ಯಾಯ ನೀರಿನ ಮೂಲಗಳನ್ನು ಗುರುತಿಸುವುದು, ಖಾಸಗಿ ಕೊಳವೆಬಾವಿ ಅಥವಾ ತೆರೆದ ಬಾವಿಗಳನ್ನು ಬಾಡಿಗೆಗೆ ಪಡೆಯುವುದು ಹಾಗೂ ಟ್ಯಾಂಕರ್ ಮೂಲಕ ನೀರು ಪೂರೈಸುವ ಮೊದಲು ನೀರಿನ ಗುಣಮಟ್ಟ ಪರೀಕ್ಷಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ಹೇಳಿದರು.

ಉದಯವಾಹಿನಿ ಚಿತ್ರ



**ಕೇಂದ್ರ ಮತ್ತು ರಾಜ್ಯ ಸರ್ಕಾರದ ಜಂಟಿ ಅನುದಾನ**

60:40ರ ಧನಸಹಾಯ ಅನುಪಾತದ ನಿಯಮದ ಅನ್ವಯ ಈ ಬೃಹತ್ ನಿಧಿಯನ್ನು ಕ್ರೋಢೀಕರಿಸಲಾಗಿದ್ದು, ಕೇಂದ್ರ ಸರ್ಕಾರದಿಂದ ಪ್ರಥಮ ತ್ರೈಮಾಸಿಕಕ್ಕೆ 1,700 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ರಾಜ್ಯ ಸರ್ಕಾರದಿಂದ1,200 ಕೋಟಿ ರೂ. ಹಣ ಬಿಡುಗಡೆ ಮಾಡಲಾಗಿದೆ. ಪ್ರತಿ ತಿಂಗಳು ಗ್ರಾಮೀಣ ಭಾಗದ 5 ಲಕ್ಷ ಜನರಿಗೆ ಕೆಲಸ ನೀಡಿ, ಮಾಸಿಕ ಒಟ್ಟು 1.5 ಕೋಟಿ ಮಾನವ ದಿನಗಳ ಉದ್ಯೋಗ ಸೃಷ್ಟಿಸುವಷ್ಟು ಭರಪೂರ ನಿಧಿ ಲಭ್ಯವಿದೆ.

**ಯಾವೆಲ್ಲಾ ಕೆಲಸಗಳಿಗೆ ಅವಕಾಶ**

ಈ ಯೋಜನೆಯ ಅಡಿಯಲ್ಲಿ ಗ್ರಾಮೀಣ ಭಾಗದಲ್ಲಿ ವೈಯಕ್ತಿಕ ಹಾಗೂ ಸಮುದಾಯದ ಅಭಿವೃದ್ಧಿಗೆ ಪೂರಕವಾದ ಕೃಷಿ ಹೊಂಡ, ಬಾವಿಗಳ ನಿರ್ಮಾಣ, ಹನಿ ನೀರಾವರಿ ಸೌಲಭ್ಯ ಕೆರೆ ಮತ್ತು ಕಾಲುವೆಗಳ ಹೂಳು ಎತ್ತುವುದು ಹಾಗೂ ಚೆಕ್ ಡ್ಯಾಂ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿದೆ. ಕೆಲಸ ಕೇಳಿ ಬರುವ ಪ್ರತಿಯೊಬ್ಬರಿಗೂ ಕಡ್ಡಾಯವಾಗಿ ಉದ್ಯೋಗ ನೀಡುವಂತೆ ಜಿಲ್ಲಾ ಪಂಚಾಯತ್ ಸಿಇಒ ಹಾಗೂ ಗ್ರಾಮ ಮಟ್ಟದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಲಾಗಿದೆ.

ಜನರ ಸಂಕಷ್ಟವನ್ನು ಅಧಿಕಾರಿಗಳು ಅರ್ಥಮಾಡಿಕೊಂಡು ಕಾರ್ಯನಿರ್ವಹಿಸಬೇಕು. ಅಗತ್ಯವಿದ್ದಾಗ ಮಾತ್ರ ಹೊಸ ಕೊಳವೆಬಾವಿಗಳನ್ನು ಕೊರೆಸಬೇಕು ಎಂದು ನಿರ್ದೇಶನ ನೀಡಿದರು.

## ಬಿಜೆಪಿ ನಾಯಕರಿಂದ ಕಾಟಾಚಾರದ ಬರ ಅಧ್ಯಯನ

ರಾಜ್ಯದ ಬಿಜೆಪಿ ನಾಯಕರಿಗೆ ರೈತರ ಬಗ್ಗೆಯೂ ಕಾಳಜಿ ಇಲ್ಲ, ವಿದ್ಯಾರ್ಥಿಗಳ ಬಗ್ಗೆಯೂ ಕಾಳಜಿ ಇಲ್ಲ, ಕಾಟಾಚಾರಕ್ಕೆ ಬರ ಅಧ್ಯಯನ ಮಾಡುತ್ತಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬಿಜೆಪಿ ನಾಯಕರು ಬರ ಪರಿಸ್ಥಿತಿಯ ಅಧ್ಯಯನ ಮಾಡಲು ತೆರಳುತ್ತಿರುವ ಬಗ್ಗೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಅವರಿಗೆ ಬರ, ನೆರೆ ಪೀಡಿತರ ಬಗ್ಗೆ ಯಾವುದೇ ಕಾಳಜಿ ಇಲ್ಲ, ಅಧಿಕಾರದ ಹಪಾಹಪಿಗೆ ಹೀಗೆ ಮಾಡುತ್ತಿದ್ದಾರೆ ಎಂದರು.

ನಿಜಕ್ಕೂ ರಾಜ್ಯದ ಹಿತಕಾಯುವ ಮನಸ್ಸಿದ್ದರೆ, ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾಗಿರುವ ಬಾಕಿ ಹಣ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಿ, ಸುಪ್ರೀಂಕೋರ್ಟ್ ಯಾವುದೇ ತಡೆ ನೀಡಿದ್ದರೂ, ಮಹಾದಾಯಿ, ಕಳಸ ಬಂಡೂರಿ ನಾಲಾ ಯೋಜನೆಗೆ ಅನುಮತಿ ನೀಡದೆ ವಿಳಂಬದ್ರೋಹ ಮಾಡುತ್ತಿರುವ ಕೇಂದ್ರದ ಮೇಲೆ ಒತ್ತಡ ಹೇರಿ ಯೋಜನೆಗೆ ಅನುಮೋದನೆ ಕೊಡಿಸಲಿ ಎಂದು ಸವಾಲು ಹಾಕಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ಇದೆ, ಕೇಂದ್ರದಿಂದ ವಿಶೇಷ ಅನುದಾನ ಕೊಡಿಸುವ ಕಾರ್ಯವನ್ನು ರಾಜ್ಯ ಬಿಜೆಪಿ ನಾಯಕರು ಏಕೆ ಮಾಡುತ್ತಿಲ್ಲ. ತೋರಿಕೆಯ ಅಧ್ಯಯನ ಬಿಟ್ಟು, ರಾಜ್ಯಕ್ಕೆ ಒಳಿತನ್ನು ಮಾಡುವ ಬಗ್ಗೆ ಚಿಂತಸಲಿ ಎಂದು ಈಶ್ವರ ಖಂಡ್ರೆ ಹೇಳಿದರು.



## ಬೆಂಗಳೂರಿನಲ್ಲಿ ಅನಧಿಕೃತವಾಗಿ ನಿಲ್ಲಿಸಲಾದ ವಾಹನಗಳ ತೆರವು ಕಾರ್ಯಾಚರಣೆ ವಿಳಂಬ; 54 ವಾಹನಗಳು ಮಾತ್ರ ತೆರವು

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಅನಧಿಕೃತವಾಗಿ ನಿಲುಗಡೆ ಮಾಡಿರುವ ವಾಹನಗಳ ತೆರವು ಅಭಿಯಾನ ನಿರೀಕ್ಷಿತ ವೇಗ ಪಡೆಯದಿರುವುದು ಕಂಡುಬಂದಿದೆ. ಬೆಂಗಳೂರಿನ ಸಾರ್ವಜನಿಕ ಸ್ಥಳಗಳು, ರಸ್ತೆಗಳಲ್ಲಿ ನಿಲುಗಡೆ ಮಾಡಿರುವ ವಾಹನಗಳನ್ನ ತೆರವುಗೊಳಿಸುವ ಅಭಿಯಾನವನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರಆರಂಭಿಸಿತ್ತು. ಆದರೆ, ಅಭಿಯಾನ ಆರಂಭವಾಗಿ ವಾರಗಳು ಕಳೆದರೂ ಇದುವರೆಗೂ ಗುರುತಿಸಿರುವ 5,133 ವಾಹನಗಳ ಪೈಕಿ ಕೇವಲ 54 ವಾಹನಗಳನ್ನು ಮಾತ್ರವೇ ತೆರವುಗೊಳಿಸಲಾಗಿದೆ ಎಂದು ಪಾಲಿಕೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಜಿಬಿಎ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ನೀಡಿರುವ ಮಾಹಿತಿ ಪ್ರಕಾರ, ಬೆಂಗಳೂರು ಸಂಚಾರ ಪೊಲೀಸರು ಹಾಗೂ ಜಿಬಿಎ ಅಧಿಕಾರಿಗಳ ಜಂಟಿ ಸಮೀಕ್ಷೆ ಹಾಗೂ ಬಿಟಿಪಿ ಅಸ್ತ್ರಂ ಆಪ್ ಮೂಲಕ ಬಂದ ದೂರುಗಳನ್ನು ಆಧರಿಸಿ ನಗರದಲ್ಲಿ ಎಲ್ಲೆಂದರಲ್ಲಿ ಪಾರ್ಕ್ ಮಾಡಲಾಗಿರುವ ಒಟ್ಟು 5,133 ವಾಹನಗಳನ್ನು ಗುರುತಿಸಲಾಗಿದೆ. ಅವುಗಳ ಪೈಕಿ ಸುಮಾರು 1,300 ವಾಹನಗಳನ್ನು ತೆರವುಗೊಳಿಸುವಂತೆ ಎಚ್ಚರಿಕೆ ಸ್ಟಿಕ್ಕರ್ ಅಂಟಿಸಲಾಗಿದೆ. ಕಳೆದ ವಾರದಿಂದ ವಾಹನಗಳ ಟೋಯಿಂಗ್ ಆರಂಭಿಸಲಾಗಿದೆಯಾದರೂ ಕಾರ್ಯಾಚರಣೆ ನಿರೀಕ್ಷಿತ ಮಟ್ಟದಲ್ಲಿ ಸಾಗುತ್ತಿಲ್ಲ.

ಎಸ್‌ಐಆರ್ ಸಂಬಂಧಿಸಿದ ಕೆಲಸಗಳಿಗೆ ಹೆಚ್ಚಿನ ಅಧಿಕಾರಿಗಳನ್ನು ನಿಯೋಜಿಸಿದ್ದರಿಂದ ಈ ಕಾರ್ಯಾಚರಣೆ ಸ್ವಲ್ಪ ವಿಳಂಬವಾಗಿದೆ. ಸದ್ಯದಲ್ಲೇ ಕಾರ್ಯಾಚರಣೆಯನ್ನು ತೀವ್ರಗೊಳಿಸಲಾಗುತ್ತದೆ. ಅಲ್ಲದೆ ಟೋಯಿಂಗ್ ಮಾಡುವ ವಾಹನಗಳನ್ನು ನಿಗದಿತ ಅವಧಿಯವರೆಗೂ ನಿಲ್ಲಿಸಲು ಸ್ಥಳದ ಕೊರತೆ ಸಹ ಇರುವುದರಿಂದ ಪರ್ಯಾಯ ಮಾರ್ಗಗಳನ್ನು ಕಂಡುಕೊಳ್ಳಬೇಕಿದೆ ಎಂದು ಪಾಲಿಕೆಯ ಅಧಿಕಾರಿಗಳು ತಿಳಿಸಿದ್ದಾರೆ.ನಗರದಲ್ಲಿ ಎಲ್ಲೆಂದರಲ್ಲಿ ಅನೇಕ ದಿನಗಳಿಂದಲೂ ನಿಲ್ಲಿಸಿರುವ ವಾಹನಗಳು ಕಂಡುಬಂದರೆ 'ಬಿಟಿಪಿ ಅಸ್ತ್ರಂ' ಆಪ್‌ನ ಮೂಲಕ ಸಾರ್ವಜನಿಕರು ರಿಪೋರ್ಟ್ ಮಾಡಬಹುದು.

## ತಮಿಳುನಾಡಿಗೆ ದಿನಕ್ಕೆ 3,500 ಕ್ಯೂಸೆಕ್ ಕಾವೇರಿ ನೀರು ಬಿಡಲು ಸಿಡಬ್ಲ್ಯೂಸಿ ಆದೇಶ: ಕರ್ನಾಟಕ ಶರಣಾಗಿದೆ ಎಂದು ಆರ್.ಅಶೋಕ್ ಕಿಡಿ

• ಉದಯವಾಹಿನಿ, ಬೆಂಗಳೂರು

ತಮಿಳುನಾಡಿಗೆ ದಿನಕ್ಕೆ 3,500 ಕ್ಯೂಸೆಕ್ ನೀರು ಬಿಡುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯೂಸಿ) ಇಂದು ಕರ್ನಾಟಕಕ್ಕೆ ಆದೇಶಿಸಿದೆ. ಕಾವೇರಿ ನೀರು ಬಿಡುಗಡೆ ಮಾಡುವಂತೆ ತಮಿಳುನಾಡು ಒತ್ತಾಯಿಸುತ್ತಿರುವ ನಡುವೆ ಇಂದು ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯೂಆರ್‌ಸಿ) ಕರ್ನಾಟಕ ಮತ್ತು ತಮಿಳುನಾಡಿನ ಪಾಲುದಾರರೊಂದಿಗೆ ಆನ್‌ಲೈನ್ ಸಭೆ ನಡೆಸಿತು. ಎರಡೂ ರಾಜ್ಯಗಳ ನಡುವಿನ ನೀರು ಹಂಚಿಕೆ ಸಮಸ್ಯೆಯನ್ನು ಪರಿಹರಿಸುವತ್ತ ಚರ್ಚೆಗಳು ನಡೆದವು.

ಎರಡೂ ರಾಜ್ಯಗಳ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ ಸಮಿತಿ ಅಂತಿಮವಾಗಿ ಕರ್ನಾಟಕಕ್ಕೆ 15 ದಿನಗಳ ಕಾಲ ನಿತ್ಯ 3,500 ಕ್ಯೂಸೆಕ್ ನೀರು ಬಿಡುಗಡೆ ಮಾಡುವಂತೆ ಸೂಚಿಸಿತು. ಈ ಬೆನ್ನಲ್ಲೇ ರಾಜ್ಯ ಸರ್ಕಾರ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ. ಕಾವೇರಿ ನೀರಿನ ವಿಚಾರದಲ್ಲಿ ಕರ್ನಾಟಕದ ಹಿತಾಸಕ್ತಿ ಕಾಪಾಡಲು ಮತ್ತೊಮ್ಮೆ ವಿಫಲವಾಗಿರುವ ಕಾಂಗ್ರೆಸ್ ಸರ್ಕಾರ, ರಾಜ್ಯದಲ್ಲಿ ಭೀಕರ ಬರಗಾಲದ ನಡುವೆಯೂ ಮತ್ತೊಮ್ಮೆ ತಮಿಳುನಾಡಿಗೆ ದಿನಕ್ಕೆ 3,500 ಕ್ಯೂಸೆಕ್ ನೀರು ಬಿಡಲು ಶರಣಾಗಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ. ಎಕ್ಸ್ ಪೋಸ್ಟ್ ಮಾಡಿರುವ ಅವರು, ರಾಜ್ಯದ ಪರ ಸಮರ್ಥ ವಾದ ಮಂಡಿಸಲು ಸಿದ್ಧರಾಗಿ ಎಂದು ಎಷ್ಟು ಬಾರಿ ಎಚ್ಚರಿಸಿದರೂ ನಿರ್ಲಕ್ಷ್ಯ ಮಾಡುತ್ತಾ ಕಾಲಹರಣ ಮಾಡಿದ ಸಿಎಂ ಡಿಕೆಶಿ ಹಾಗೂ ನೀರಾವರಿ ಸಚಿವ ರಾಮಲಿಂಗಾ ರೆಡ್ಡಿ ಅವರು ಈಗ ಮತ್ತೊಮ್ಮೆ ಕಾವೇರಿಯ ಮಡಿಲನ್ನು ಬರಿದು ಮಾಡುವ ಮೂಲಕ ಕನ್ನಡಿಗರಿಗೆ ದ್ರೋಹ ಬಗೆಯಲು ಹೊರಟಿದ್ದಾರೆ ಎಂದು ಕಿಡಿಕಾರಿದ್ದಾರೆ.



ಉದಯವಾಹಿನಿ ಚಿತ್ರ

ಕಾಂಗ್ರೆಸ್ ಸರ್ಕಾರ ಈ ಹಿಂದೆ ಮಾಡಿದ ತಪ್ಪಿನಿಂದ ಈಗಾಗಲೇ ಕರ್ನಾಟಕದ ಜಲಾಶಯಗಳು ಬರಿದಾಗಿದ್ದು, ಕನ್ನಡಿಗರು ಹನಿ ನೀರಿಗೂ ಪರದಾಡುವ ದಯನೀಯ ಪರಿಸ್ಥಿತಿ ಇದೆ. ಸಿಎಂ ಡಿಕೆಶಿ ಅವರು ಹೈಕಮಾಂಡ್ ಮುಲಾಜಿಗೆ ಬಿದ್ದು, ತಮ್ಮ ಇಂಡಿ ಮೈತ್ರಿಕೂಟದ ಟಿವಿಕೆ ಸರ್ಕಾರವನ್ನು ಮೆಚ್ಚಿಸಲು ಮತ್ತೊಮ್ಮೆ ಕಾವೇರಿ ನೀರು ಬಿಟ್ಟರೆ ಜನ ಬೀದಿಗಿಳಿದು ಉಗ್ರ ಹೋರಾಟ ನಡೆಸುವುದು ಗ್ಯಾರಂಟಿ ಎಂದು ತಿಳಿಸಿದ್ದಾರೆ. ಸರಿಯಾದ ಅಂಕಿ ಅಂಶ ಸಮೇತ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ರಾಜ್ಯದ ವಸ್ತುಸ್ಥಿತಿ ಮನವರಿಕೆ ಮಾಡಿಕೊಟ್ಟು ಕನ್ನಡಿಗರ ಹಿತಾಸಕ್ತಿ ಕಾಪಾಡುವುದು ರಾಜ್ಯ ಸರ್ಕಾರದ ಕರ್ತವ್ಯ. ಸಿಎಂ ಡಿಕೆಶಿ ಅವರು ಕೂಡಲೇ ಅಧಿಕಾರಿಗಳು ಹಾಗು ವಕೀಲರ ಸಭೆ ನಡೆಸಿ, ಕಾವೇರಿ ನೀರು ನಿಯಂತ್ರಣ ಸಮಿತಿಯ ಶಿಫಾರಸಿನ ವಿರುದ್ಧ ಮೇಲ್ಮನವಿ ಸಲ್ಲಿಸಿ ರಾಜ್ಯದ ಪರವಾಗಿ ಗಟ್ಟಿಯಾದ ವಾದ ಮಂಡಿಸಲು ಸಿದ್ಧತೆ ನಡೆಸಬೇಕು.

## ಪಶು ವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ಅಕ್ರಮ ಆರೋಪ; ಪ್ರಕರಣ ಸಿಐಡಿಗೆ ವರ್ಗಾವಣೆ

• ಉದಯವಾಹಿನಿ, ಬೆಂಗಳೂರು

ಪಶು ವೈದ್ಯಾಧಿಕಾರಿಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎನ್ನಲಾಗಿರುವ ಪ್ರಕರಣದ ತನಿಖೆಯನ್ನು ಸಿಐಡಿಗೆ ವರ್ಗಾವಣೆ ಮಾಡಲಾಗಿದೆ.

ವಿಧಾನಸೌಧ ಠಾಣೆಯಲ್ಲಿ ದಾಖಲಾಗಿರುವ ಎರಡು ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸಿ ಪೊಲೀಸ್ ಮಹಾನಿರ್ದೇಶಕ ಡಾ. ಎಂ. ಎ. ಸಲೀಂ ಆದೇಶಿಸಿದ್ದಾರೆ. ಕರ್ನಾಟಕ ಲೋಕಸೇವಾ ಆಯೋಗ ನಡೆಸಿದ್ದ ಪಶು ವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ಪಶುವೈದ್ಯ ಮಂಜುನಾಥ್ ಎಂಬುವರು ವಿಧಾನಸೌಧ ಠಾಣೆಗೆ ದೂರು ನೀಡಿದ್ದರು.

ದೂರಿನ ಮೇರೆಗೆ ಕೆಪಿಎಸ್‌ಸಿಯ ಅಧ್ಯಕ್ಷ ಸ್ಥಾನದಿಂದ ಅಮಾನತುಗೊಂಡಿರುವ ಶಿವಶಂಕರಪ್ಪ ಎಸ್. ಸಾಹುಕಾರ ಹಾಗೂ ಮತ್ತಿತರರ ವಿರುದ್ಧ ಎರಡು ಪ್ರತ್ಯೇಕ ಪ್ರಕರಣಗಳು ದಾಖಲಾಗಿದ್ದವು. ಅಭ್ಯರ್ಥಿಗಳ ಆರೋಪವೇನು ಪಶುಸಂಗೋಪನೆ ಮೀನುಗಾರಿಕಾ ಇಲಾಖೆಯ 400 ಪಶು ವೈದ್ಯಾಧಿಕಾರಿಗಳ ಹುದ್ದೆಗೆ ಇದೇ ವರ್ಷ ಜನವರಿ 8 ಹಾಗೂ 9ರಂದು ಪರೀಕ್ಷೆ ನಡೆಸಿದ್ದ ಕರ್ನಾಟಕ ಲೋಕಸೇವಾ ಆಯೋಗವು ಜುಲೈ 17ರಂದು ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಿದೆ.

## ಹರಿನಾಮ ಸಂಕೀರ್ತನೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ಯಲಹಂಕ ಉಪನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಜುಲೈ 30, ಗುರುವಾರ ಸಂಜೆ 6-30ಕ್ಕೆ ಶ್ರೀ ರಾಮ್ ರಕ್ಷಿತ್ ಇವರಿಂದ ಹರಿನಾಮ ಸಂಕೀರ್ತನೆ ಏರ್ಪಡಿಸಿದ್ದು, ಇವರ ಗಾಯನಕ್ಕೆ ಹಾರ್ಮೋನಿಯಂ ವಾದನದಲ್ಲಿ ಶ್ರೀ ಭರತ್ ದರೋಜಿ, ತಬಲಾ ವಾದನದಲ್ಲಿ ಶ್ರೀ ಶರಣು ಗೋಗಿ ಹಾಗೂ ತಾಳದಲ್ಲಿ ಶ್ರೀ ಸುಧೀಂದ್ರ ಕುಲಕರ್ಣಿ ಸಹಕಾರ ನೀಡಲಿದ್ದಾರೆ ಎಂದು ಟಿ ಟಿ ಡಿ ಹೆಚ್.ಡಿ.ಪಿ.ಪಿ ಸಂಚಾಲಕರಾದ ಡಾ|| ಪಿ. ಭುಜಂಗರಾವ್ ತಿಳಿಸಿದ್ದಾರೆ.

## ಗುರುಪೂರ್ಣಿಮೆಯ ಪ್ರಯುಕ್ತ ವಿಶೇಷ ಪ್ರವಚನ

• ಉದಯವಾಹಿನಿ, ಬೆಂಗಳೂರು

ದಿನಗೂಲಿ ಕಾರ್ಮಿಕರ ಕುಟುಂಬದಲ್ಲಿ ಜನಿಸಿ, ಆರ್ಥಿಕ ಸಂಕಷ್ಟಗಳ ನಡುವೆ ಬೆಳೆದ ಬೆಂಗಳೂರಿನ 24 ವರ್ಷದ ಅಥ್ಲೀಟ್ ಯಶಸ್ ಪಲಾಕ್ಷ ಇಂದು ಭಾರತದ ಅತ್ಯಂತ ವೇಗದ ಸಕ್ರಿಯ 400 ಮೀ. ಹರ್ಡಲ್ಸ್ ಓಟಗಾರನಾಗಿ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ದೇಶವನ್ನು ಪ್ರತಿನಿಧಿಸುತ್ತಿದ್ದಾರೆ. ಹಲವು ಗಂಭೀರ ಗಾಯಗಳನ್ನು ಎದುರಿಸಿ, ನಿರಂತರ ಹಿನ್ನಡೆಗಳನ್ನು ಮೀರಿ ಅವರು ಗ್ಲಾಸ್ಗೋ ಕಾಮನ್‌ವೆಲ್ತ್ ಗೇಮ್ಸ್ 2026ಕ್ಕೆ ಅರ್ಹತೆ ಪಡೆದಿರುವುದು ಸ್ಪೂರ್ತಿದಾಯಕ ಕಥೆಯಾಗಿದೆ. ತಮ್ಮ ಅಥ್ಲೆಟಿಕ್ಸ್ ಪಯಣದ ಬಗ್ಗೆ ಮಾತನಾಡಿರುವ ಯಶಸ್, ಕ್ರೀಡೆಯೇ ತಮ್ಮ ಕನಸಾಗಿತ್ತು ಎಂದು ಹೇಳುತ್ತಾರೆ. ನಮ್ಮ ಕುಟುಂಬದವರು ಪದವಿ ಪಡೆಯುತ್ತಿದ್ದರು.



ಉದಯವಾಹಿನಿ ಚಿತ್ರ

# ಬೆಂಗಳೂರು ಸಂಚಾರ ಸುಧಾರಣೆಗೆ ದೊಡ್ಡ ತೊಡಕು

## ಕಾನೂನು ಸುಳಿಯಲ್ಲಿ ಸುರಂಗ ರಸ್ತೆ, ಮೆಖ್ರಿ ಕಾರಿಡಾರ್ ಯೋಜನೆಗಳು, ನಿಯಮವೇ ಅಡ್ಡಿ..?

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಪ್ರಸ್ತಾವಿತ 2.5 ಕಿ.ಮೀ. ಉದ್ದದ ಕಿರು ಸುರಂಗ ರಸ್ತೆ ಯೋಜನೆ ಹಾಗೂ ಮೆಖ್ರಿ ವೃತ್ತದವರೆಗೆ ನಿರ್ಮಿಸಲು ಉದ್ದೇಶಿಸಿರುವ ಮೇಲ್ಸೇತುವೆ (ಎಲಿವೇಟೆಡ್ ಕಾರಿಡಾರ್) ಯೋಜನೆ ಕಾನೂನು ತೊಡಕಿನಲ್ಲಿ ಸಿಲುಕುವ ಸಾಧ್ಯತೆ ಎದುರಾಗಿದೆ.ಬೆಂಗಳೂರು ಮಹಾನಗರ ಭೂ ಸಾರಿಗೆ ಪ್ರಾಧಿಕಾರ (ಬಿಎಂಎಲ್‌ಟಿಎ) ಪರಿಶೀಲನೆ ನಡೆಸದೆ ಯೋಜನೆಗಳಿಗೆ ಅನುಮೋದನೆ ನೀಡಿರುವುದು ಮತ್ತು ಬಿಎಂಎಲ್‌ಟಿಎ ಕಾಯ್ದೆಯ ನಿಯಮ 24 (ಸೇವಿಂಗ್ಸ್ ಕ್ಲಾಸ್) ಅನ್ನು ಆಧಾರವಾಗಿಸಿಕೊಂಡಿರುವುದರಿಂದ ಯೋಜನೆಗಳ ಭವಿಷ್ಯದ ಬಗ್ಗೆ ಪ್ರಶ್ನೆಗಳು ಉದ್ಭವಿಸಿವೆ. ರಾಜ್ಯ ಸರ್ಕಾರ 2025ರ ಡಿಸೆಂಬರ್ 8ರಂದು ಈ ಎರಡೂ ಯೋಜನೆಗಳಿಗೆ ಅನುಮೋದನೆ ನೀಡಿತ್ತು. ಈ ವೇಳೆಗೆ ಬಿಎಂಎಲ್‌ಟಿಎ ಕಾಯ್ದೆ ಜಾರಿಯಲ್ಲಿದ್ದ ಕಾರಣ, ಹೆಬ್ಬಾಳದಿಂದ ಸಿಲ್ಕ್‌ಬೋರ್ಡ್‌ವರೆಗೆ ಪ್ರಸ್ತಾವಿತ ದೀರ್ಘ ಸುರಂಗ ರಸ್ತೆ ಯೋಜನೆಯಂತೆ ಈ ಯೋಜನೆಗಳೂ ಬಿಎಂಎಲ್‌ಟಿಎ ಪರಿಶೀಲನೆಗೆ ಒಳಪಡಬೇಕಿತ್ತು ಎಂಬ ವಾದ ಕೇಳಿಬಂದಿದೆ.ಆದರೆ, ಈ ಯೋಜನೆಗಳನ್ನು ಬಿಎಂಎಲ್‌ಟಿಎ ಪರಿಶೀಲನೆಯಿಂದ ವಿನಾಯಿತಿ ನೀಡಲು ಬಳಸಲಾಗಿರುವ ನಿಯಮ 24 ಇದೀಗ ಕಾನೂನು ಸವಾಲು ಎದುರಿಸುತ್ತಿದೆ. ಗಮನಾರ್ಹ ಸಂಗತಿಯೆಂದರೆ, ಬಿಎಂಎಲ್‌ಟಿಎ ನಿಯಮಗಳ ಕರಡು 2026ರ ಜನವರಿ 3ರಂದು ಮೊದಲ ಬಾರಿಗೆ ಸಾರ್ವಜನಿಕರ ಮುಂದೆ ಬಂದಿತ್ತು. ಆಗಲೇ 'ಸೇವಿಂಗ್ಸ್ ಕ್ಲಾಸ್' ಬಗ್ಗೆ ಮೊದಲ ಬಾರಿಗೆ ಉಲ್ಲೇಖಿಸಲಾಗಿತ್ತು. ನಂತರ ಸಾರ್ವಜನಿಕರ ಆಕ್ಷೇಪಣೆ ಮತ್ತು ಟೀಕೆಗಳ ನಡುವೆಯೂ ಅಂತಿಮ ನಿಯಮಗಳನ್ನು 2026ರ ಜುಲೈ 2ರಂದು ಅಧಿಸೂಚನೆ ಹೊರಡಿಸಲಾಗಿತ್ತು. ಈ ನಿಯಮದ ಸಾಂವಿಧಾನಿಕ ಮಾನ್ಯತೆಯನ್ನು ಪ್ರಶ್ನಿಸಿ ನ್ಯಾಯಾಲಯದಲ್ಲಿಯೂ ಅರ್ಜಿ ಸಲ್ಲಿಸಲಾಗಿದೆ.



ಉದಯವಾಹಿನಿ ಚಿತ್ರ

ಆದರೆ, ನಂತರ ಡಲ್ಟ್ ಬಿಬಿಎಂಪಿಗೆ ಪತ್ರ ಬರೆದು, ಬಿಎಂಎಲ್‌ಟಿಎ ಇನ್ನೂ ರಚನೆಯಾಗಿರದ ಕಾರಣ ತಮ್ಮ ಅಭಿಪ್ರಾಯವನ್ನು ಬಿಎಂಎಲ್‌ಟಿಎ ಅಧಿಕೃತ ಅಭಿಪ್ರಾಯ ಎಂದು ಪರಿಗಣಿಸಬಾರದು ಎಂದು ಸ್ಪಷ್ಟಪಡಿಸಿತ್ತು.ಈ ಕುರಿತು ಪ್ರತಿಕ್ರಿಯಿಸಿದ ಬೆಂಗಳೂರು ಪ್ರಜಾ ವೇದಿಕೆ ಸಂಸ್ಥಾಪಕ ಸದಸ್ಯ ಮುಕುಂದ ಎನ್.ಎಸ್., ನಿಯಮ 24 ಅನ್ನು ಸ್ವತಃ ತನ್ನ ಉದ್ದೇಶವನ್ನೇ ಹಾಳುಮಾಡುವ ನಿಯಮ ಎಂದು ಟೀಕಿಸಿದ್ದಾರೆ. ನಗರ ಸಾರಿಗೆ ಯೋಜನೆಗಳನ್ನು ಪರಿಶೀಲಿಸುವುದಕ್ಕಾಗಿಯೇ ಬಿಎಂಎಲ್‌ಟಿಎ ಸ್ಥಾಪಿಸಲಾಗಿದೆ. ಅಂತಹ ಪ್ರಾಧಿಕಾರವನ್ನು ಬದಿಗಿಟ್ಟು ಯೋಜನೆಗಳಿಗೆ ವಿನಾಯಿತಿ ನೀಡಿದರೆ, ಕಾಯ್ದೆಯ ಮೂಲ ಉದ್ದೇಶವೇ ಹಾಳಾಗುತ್ತದೆ. ಹೀಗಾಗಿ ಈ ನಿಯಮವನ್ನು ನ್ಯಾಯಾಲಯ ರದ್ದುಗೊಳಿಸುವ ಸಾಧ್ಯತೆ ಇದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ), ಯೋಜನೆಗಳಿಗೆ ನಿಯಮ 24ರ ಅಡಿಯಲ್ಲಿ ವಿನಾಯಿತಿ ನೀಡಲಾಗಿದೆ ಎಂದು ಒಪ್ಪಿಕೊಂಡಿದೆ.ಡಲ್ಟ್‌ನ ನಗರ ಯೋಜನೆ ಉಪನಿರ್ದೇಶಕ ಲಕ್ಷ್ಮೀಪತಿ ಅವರು ಮಾತನಾಡಿ, ಕಾಯ್ದೆ ಜಾರಿಯಾದ ಬಳಿಕ ಬಿಎಂಎಲ್‌ಟಿಎ ರಚನೆ ವಿಳಂಬವಾಗಿತ್ತು. ಅಥವಾ ನ್ಯಾಯಾಂಗದ ಪರಿಶೀಲನೆಯಿಂದ ಮತ್ತಷ್ಟು ವಿಳಂಬವಾಗುತ್ತವೆಯೇ ಎಂಬ ಪ್ರಶ್ನೆ ಇದೀಗ ಚರ್ಚೆಗೆ ಗ್ರಾಸವಾಗಿದೆ.

**ಪ್ರಾಧಿಕಾರ ರಚನೆಗಾಗಿ ಕಾಯುವುದರಿಂದ ಯೋಜನೆ ವಿಳಂಬವಾಗಬಾರದು ಎಂಬ ಕಾರಣಕ್ಕೆ ಸರ್ಕಾರ ವಿನಾಯಿತಿ ನಿಯಮವನ್ನು ತಂದಿತು. ಅದರ ಆಧಾರದಲ್ಲಿಯೇ ಡಿಸೆಂಬರ್ 2025ರಲ್ಲಿ ಯೋಜನೆಗಳಿಗೆ ಸರ್ಕಾರ ಅನುಮೋದನೆ ನೀಡಿತು ಎಂದು ಸ್ಪಷ್ಟಪಡಿಸಿದ್ದಾರೆ.**

**ಬಿಎಂಎಲ್‌ಟಿಎ ಕಾಯ್ದೆ ಜಾರಿಗೆ**

**2023ರ ಮಾರ್ಚ್ 27ರಿಂದ ಬಿಎಂಎಲ್‌ಟಿಎ ಕಾಯ್ದೆ ಜಾರಿಗೆ ಬಂದಿದ್ದು, ಅದರ ನಂತರ ಪ್ರಸ್ತಾಪವಾಗುವ ಪ್ರಮುಖ ನಗರ ಸಾರಿಗೆ ಯೋಜನೆಗಳು ಪ್ರಾಧಿಕಾರದ ವ್ಯಾಪ್ತಿಗೆ ಬರುತ್ತವೆ. ಬಿಎಂಎಲ್‌ಟಿಎ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿರುವ ನಗರ ಭೂ ಸಾರಿಗೆ ನಿರ್ದೇಶನಾಲಯ (ಡಲ್ಟ್), ಹೆಬ್ಬಾಳಸಿಲ್ಕ್‌ಬೋರ್ಡ್ ಸುರಂಗ ರಸ್ತೆ ಯೋಜನೆ ಕುರಿತು ಈ ಹಿಂದೆ ಹಲವು ಆಕ್ಷೇಪಣೆಗಳನ್ನು ದಾಖಲಿಸಿತ್ತು.**

# ವಿಮಾನ ನಿಲ್ದಾಣದಲ್ಲಿ ತುಳುನಾಡ ವೈಭವ: ಪ್ರಯಾಣಿಕರನ್ನು ಸ್ವಾಗತಿಸುತ್ತಿದೆ ಮತ್ತೊಂದು 'ಕಂಬಳ' ಕಲಾಕೃತಿ!

• ಉದಯವಾಹಿನಿ , ಮಂಗಳೂರು

ಕರಾವಳಿಯ ಜಾನಪದ ಕ್ರೀಡೆ ಹಾಗೂ ಪರಂಪರೆಯನ್ನು ದೇಶ - ವಿದೇಶಗಳಿಂದ ಬರುವ ಪ್ರಯಾಣಿಕರಿಗೆ ಪರಿಚಯಿಸುವ ನಿಟ್ಟಿನಲ್ಲಿ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಆಗಮನ ವಿಭಾಗದ ಕೆಳಗಿನ ಮಹಡಿಯ ಆವರಣದಲ್ಲಿ ಮತ್ತೊಂದು 'ಕಂಬಳ' ಸಾಂಸ್ಕೃತಿಕ ಕಲಾಕೃತಿಯನ್ನು ಅನಾವರಣಗೊಳಿಸಲಾಗಿದೆ ಎಂದು ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪ್ರಕಟಣೆ ತಿಳಿಸಿದೆ. ಆಂತರಿಕ ವಿಮಾನಗಳ ಬ್ಯಾಗೇಜ್ ಬೆಲ್ಟ್ ಬಳಿ ಈಗಾಗಲೇ ಮೊದಲ ಕಂಬಳ ಕಲಾಕೃತಿ ಪ್ರಯಾಣಿಕರನ್ನು ಆಕರ್ಷಿಸುತ್ತಿದ್ದು, ಇದೀಗ ಎರಡನೇ ಕಲಾಕೃತಿಯು ಮಂಗಳೂರಿಗೆ ಕಾಲಿಡುವ ಪ್ರತಿ ಪ್ರಯಾಣಿಕರನ್ನು ಸ್ವಾಗತಿಸುತ್ತಿದೆ. ಕರಾವಳಿ ಕರ್ನಾಟಕ ಹಾಗೂ ತುಳುನಾಡಿನ ಸಂಸ್ಕೃತಿ


ಉದಯವಾಹಿನಿ ಚಿತ್ರ

ಮತ್ತು ಪಾರಂಪರಿಕ ಕಲೆಗಳನ್ನು ಪ್ರವಾಸಿಗರಿಗೆ ತೀರಾ ಹತ್ತಿರದಿಂದ ಅನುಭವಿಸುವಂತೆ ಮಾಡುವುದು ವಿಮಾನ ನಿಲ್ದಾಣದ ಉದ್ದೇಶವಾಗಿದೆ. ಈ ಹಿಂದೆ ನಿರ್ಗಮನ ವಿಭಾಗದ ಸಮೀಪದ ರೌಂಡ್ ಎಬೌಟ್ ಬಳಿ ಬೃಹತ್ ಗ್ರಾನೈಟ್‌ನಿಂದ ಕೆತ್ತಲಾದ ಯಕ್ಷಗಾನ ಕಲಾವಿದನ ಭವ್ಯ ಪ್ರತಿಮೆಯನ್ನು ಸ್ಥಾಪಿಸಲಾಗಿತ್ತು. ಬ್ಯಾಗೇಜ್ ಕ್ಲೇಮ್ ಬೆಲ್ಟ್ ಹಾಗೂ ಆಗಮನ ವಿಭಾಗದ ಕೆಳಗಿನ ಮಹಡಿಯಲ್ಲಿ ಕೋಣಗಳ ಓಟದ ಕಂಬಳದ ದೃಶ್ಯಾವಳಿ. ಆಂತರಿಕ ಆಗಮನ ವಿಭಾಗ ಹಾಗೂ ಕೆಳಗಿನ ಮಹಡಿಯಲ್ಲಿ ಯಕ್ಷಗಾನದ ಆಕರ್ಷಕ ಮುಖವಾಡಗಳು ಮತ್ತು ಭವ್ಯ ಕಿರೀಟಗಳ ಪ್ರದರ್ಶನ. ವಿಮಾನದಿಂದ ಇಳಿದು ಮಂಗಳೂರು ನಗರಕ್ಕೆ ಕಾಲಿಡುತ್ತಿದ್ದಂತೆಯೇ ತುಳುನಾಡಿನ ಶ್ರೀಮಂತ ಜಾನಪದ ಮತ್ತು ರಂಗಕಲೆಗಳ ಪರಿಚಯವನ್ನು ಉಣಬಡಿಸುವ ಮಂಗಳೂರು ವಿಮಾನ ನಿಲ್ದಾಣದ ಈ ಸಾಂಸ್ಕೃತಿಕ ಸ್ಪರ್ಶಕ್ಕೆ ದೇಶ-ವಿದೇಶಿ ಪ್ರಯಾಣಿಕರಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ ಎಂದು ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪ್ರಕಟಣೆ ತಿಳಿಸಿದೆ.

# ದಾವಣಗೆರೆಯಲ್ಲಿ ಇನ್ನೂ ಜೀವಂತವಿದೆ ಅಮಾನವೀಯ ಮಲಹೊರುವ ಪದ್ಧತಿ!

## ಮಲದ ಗುಂಡಿ ಸ್ವಚ್ಛ ಮಾಡುತ್ತಿದ್ದ ವ್ಯಕ್ತಿ ಟ್ಯಾಂಕ್‌ನಿಂದ ಹೊರಬಂದಿರುವ ದೃಶ್ಯ ಕ್ಯಾಮರಾದಲ್ಲಿ ಸೆರೆಯಾಗಿದೆ.

• ಉದಯವಾಹಿನಿ, ದಾವಣಗೆರೆ

ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳ ವಿರುದ್ಧ ಗಂಭೀರ ಆರೋಪ ಕೇಳಿ ಬಂದಿದೆ. ವ್ಯಕ್ತಿಗಳಿಬ್ಬರಿಗೆ ಮಲ ಗುಂಡಿ ಸ್ವಚ್ಛಗೊಳಿಸಲು ನಿಯೋಜನೆ ಮಾಡಿದ್ದರು ಎಂದು ದಲಿತ ಸಂಘಟನೆಗಳು ಆರೋಪಿಸಿವೆ.

ದಾವಣಗೆರೆಯಲ್ಲಿ ಅಮಾನವೀಯ ಪದ್ಧತಿ ಇನ್ನೂ ಜೀವಂತವಿದೆ ಎಂಬ ಆರೋಪ ಕೇಳಿ ಬಂದಿದೆ. ನಗರದ ಪ್ರವಾಸಿ ಮಂದಿರದಲ್ಲಿ ಮನುಷ್ಯ ತ್ಯಾಜ್ಯ ತುಂಬಿದ ಟ್ಯಾಂಕ್ ಅನ್ನು ಇಬ್ಬರು ವ್ಯಕ್ತಿಗಳು ಸ್ವಚ್ಛಗೊಳಿಸಿರುವ ಘಟನೆ ನಗರದ ಜಯದೇವ ಸರ್ಕಲ್ ಬಳಿ ಇರುವ ಹಳೇ ಪ್ರವಾಸಿ ಮಂದಿರದಲ್ಲಿ ನಡೆದಿದೆ ಎಂದು ತಿಳಿದು ಬಂದಿದೆ. ಸ್ವಚ್ಛ ಮಾಡುತ್ತಿದ್ದ ವ್ಯಕ್ತಿ ಟ್ಯಾಂಕ್‌ನಿಂದ ಹೊರಬಂದಿರುವ ದೃಶ್ಯ ಸ್ಥಳೀಯರೊಬ್ಬರ ಮೊಬೈಲ್ ಕ್ಯಾಮರಾದಲ್ಲಿ ಸೆರೆಯಾಗಿದೆ. ಈ ವಿಚಾರವೀಗ ಸದ್ದು ಮಾಡುತ್ತಿದೆ.

ಸ್ಕ್ಯಾವಿಂಜರ್ ಪದ್ಧತಿ ಇನ್ನೂ ಜೀವಂತ ಇದ್ದು, ವ್ಯಕ್ತಿಗೆ ಯಾವುದೇ ರೀತಿಯ ಸುರಕ್ಷತಾ ಕ್ರಮಗಳನ್ನು ವಹಿಸದೇ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಟ್ಯಾಂಕ್‌ಗೆ ಇಳಿಸಿದ್ದಾರೆ ಎಂದು ಸ್ವತಃ ಸ್ವಚ್ಛ ಮಾಡಿದ್ದ ವ್ಯಕ್ತಿ ವಿಡಿಯೋದಲ್ಲಿ ತಿಳಿಸಿದ್ದಾರೆ. ಪಾಲಿಕೆಯ ಪೌರಕಾರ್ಮಿಕರಿಂದ ಯಂತ್ರಗಳ ಸಹಾಯದಿಂದ ಮಲಗುಂಡಿಯನ್ನು ಸ್ವಚ್ಛಗೊಳಿಸಬೇಕು.

ಆದರೆ ಅಧಿಕಾರಿಗಳು ಖಾಸಗಿ ವ್ಯಕ್ತಿಯಿಂದ ಅಮಾನವೀಯ ಕೆಲಸ ಮಾಡಿಸಿರುವುದು ತಡವಾಗಿ ಬೆಳಕಿಗೆ ಬಂದಿದೆ. ಐಬಿಯಲ್ಲಿ ಮನುಷ್ಯ ತ್ಯಾಜ್ಯ ಎಲ್ಲಾ ಟ್ಯಾಂಕ್‌ನಲ್ಲಿ ಸಂಗ್ರಹ ಆಗಲಿದ್ದು, ನಂತರ ಯುಜಿಡಿ ಮೂಲಕ ಹೊರಕ್ಕೆ ಹೋಗಲಿದೆ. ಟ್ಯಾಂಕ್ ಸ್ವಚ್ಛಗೊಳಿಸಲು ಖಾಸಗಿ ವ್ಯಕ್ತಿಯನ್ನು ಬಳಸಿದ್ದರಿಂದ ದಲಿತ ಪರ ಸಂಘಟನೆಗಳ ಆಕ್ರೋಶಕ್ಕೆ ಕಾರಣವಾಗಿದೆ. ಸದ್ಯ, ತಪ್ಪು ಮಾಡಿದ ಅಧಿಕಾರಿಗಳ ವಿರುದ್ಧ ಕ್ರಮವಹಿಸುವಂತೆ ಡಿಎಸ್ ಎಸ್ ಸಂಘಟನೆಯವರು ಜಿಲ್ಲಾಧಿಕಾರಿ ಡಾ.ಜಿ.ಎಂ. ಗಂಗಾಧರಸ್ವಾಮಿ ಅವರಿಗೆ ಮನವಿ ಸಲ್ಲಿಸಿದ್ದಾರೆ.

**ಮಲವನ್ನು ಸ್ವಚ್ಛ ಮಾಡ್ತಿರುವ ವ್ಯಕ್ತಿ ವಿಡಿಯೋದಲ್ಲಿ ಹೇಳಿದ್ದೇನು?:**


ಉದಯವಾಹಿನಿ ಚಿತ್ರ

ಸ್ವಚ್ಛಗೊಳಿಸುತ್ತಿರುವ ವ್ಯಕ್ತಿ ಮಾತನಾಡಿ, ಇಂಜಿನಿಯರ್ ಒಬ್ಬರು ಸ್ವಚ್ಛ ಮಾಡುವಂತೆ ಹೇಳಿದ್ದರು.

ಅದಕ್ಕೆ ನಾವು ಸ್ವಚ್ಛ ಮಾಡುತ್ತಿದ್ದೇವೆ. ಗ್ಲೌಸ್ ಹಾಗೂ ಇನ್ನಿತರ ಸಾಮಾನುಗಳು ಚೀಲದಲ್ಲಿವೆ. ನಮ್ಮ ಬಳಿ ಸ್ವಚ್ಛ ಮಾಡುವ ಮಿಷನ್ ಇಲ್ಲ. ಹಾಗೇ ಮಾಡಲು ಹೇಳಿದ್ರು. ಅದಕ್ಕೆ ಮಾಡ್ತಿದ್ದೇವೆ. ನಮಗೆ ಸ್ವಚ್ಛ ಮಾಡಲು ಹೇಳಿದ ಅಧಿಕಾರಿಯ ನಂಬರ್ ಕೊಡುವೆ ನೀವೆ ಮಾತನಾಡಿ ಎಂದು ವಿಡಿಯೋದಲ್ಲಿ ಹೇಳಿದ್ದಾರೆ.

### ಘಟನಾ ಸ್ಥಳದಲ್ಲಿ ವಿಡಿಯೋ ಮಾಡಿದವರು ಹೇಳಿದ್ದೇನು?:

ಸ್ಥಳದಲ್ಲೇ ವಿಡಿಯೋ ಮಾಡಿದ್ದ ಡಿಎಸ್‌ಎಸ್ ಜಿಲ್ಲಾ ಸಂಚಾಲಕ ರಾಘವೇಂದ್ರ ಕಡೆಮನೆ ಮಾತನಾಡಿ, ಕೆಲಸದ ನಿಮಿತ್ತ ಪ್ರವಾಸಿ ಮಂದಿರಕ್ಕೆ ತೆರಳಿದ್ದೆ. ಅಲ್ಲಿ ಮನುಷ್ಯರು ಮಲಗುಂಡಿಯನ್ನು ಸ್ವಚ್ಛ ಮಾಡ್ತಿದ್ದರು.

ಈ ರೀತಿಯ ಘಟನೆ ನನ್ನ ಗಮನಕ್ಕೆ ಬಂದಿಲ್ಲ. ಲೋಕೋಪಯೋಗಿ ಇಲಾಖೆ ಅಧಿಕಾರಿಗಳ ಬಳಿ ಮಾತನಾಡುವೆ. ಈ ರೀತಿ ನಮ್ಮ ಜಿಲ್ಲೆಯಲ್ಲಿ ನಡೆಯಲು ಬಿಡಲ್ಲ ಎಂದು ಅವರು ತಿಳಿಸಿದರು. -ಡಾ.ಜಿ.ಎಂ.ಗಂಗಾಧರಸ್ವಾಮಿ

ಈ ರೀತಿಯ ಕೆಲಸಗಳನ್ನು ಮಾಡಲು ದೊಡ್ಡ ಯಂತ್ರಗಳು ಪಾಲಿಕೆಯಲ್ಲಿವೆ. 2013 ಎಮ್‌ಎಸ್ ಆಯಕ್ಟ್ ಪ್ರಕಾರ ಸರ್ಕಾರ ಇದನ್ನು ನಿಷೇಧ ಮಾಡಿದೆ. ಗ್ಲೌಸ್, ಬೂಟ್, ಇಲ್ಲದೇ ಕೆಲಸ ಮಾಡಿದ್ದಾರೆ. ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಈ ರೀತಿ ಮಾಡಿ ಎಂದು ಹೇಳಿದ್ದಾರೆ.-ಡಾ.ಜಿ.ಎಂ.ಗಂಗಾಧರಸ್ವಾಮಿ

ಮಲಗುಂಡಿ ಕಟ್ಟಿದೆ, ಸ್ವಚ್ಛ ಮಾಡಿಸಿದು ಹೇಳಿದ್ದರು. ಅವರಿಗೆ ಮಾಸ್ಕ್, ಗ್ಲೌಸ್, ಬೂಟ್ ಎಲ್ಲಾ ಮುಂಜಾಗ್ರತಾ ಸಲಕರಣೆಗಳ ಸಹಾಯದಿಂದ ಮಾಡ್ಬೇಕು. ಇದನ್ನು ಮಾಡಿಸಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದ್ದೇವೆ ಎಂದು ತಿಳಿಸಿದರು.-ಡಾ.ಜಿ.ಎಂ.ಗಂಗಾಧರಸ್ವಾಮಿ

# ಕಬ್ಬಿಣದ ರಾಡ್‌ನಿಂದ ಹೊಡೆದು ಪತ್ನಿಯ ಕೊಲೆ ಆರೋಪ; ವಿಡಿಯೋ ಮಾಡಿ ವಿಕೃತಿ ಮೆರೆದ ಪತಿ ಸೆರೆ

• ಉದಯವಾಹಿನಿ, ಬಾಗಲಕೋಟೆ

ವ್ಯಕ್ತಿಯೊಬ್ಬ ತನ್ನ ಪತ್ನಿಗೆ ರಾಡ್‌ನಿಂದ ಹಲ್ಲೆ ನಡೆಸಿ, ನೇಣು ಹಾಕಿ ಕೊಲೆ ಮಾಡಿದ್ದಲ್ಲದೇ ಆ ವಿಡಿಯೋ ಮಾಡಿರುವ ಗಂಭೀರ ಆರೋಪ ಕೇಳಿ ಬಂದಿದೆ. ಜಿಲ್ಲೆಯ ಬೀಳಗಿ ತಾಲ್ಲೂಕಿನ ಗಲಗಲಿ ಗ್ರಾಮದಲ್ಲಿ ಅಮಾನವೀಯ ಘಟನೆ ನಡೆದಿದೆ.

ಪ್ರಗತಿ ಉರ್ಫ್ ಭಾಗ್ಯಶ್ರೀ (23) ಕೊಲೆಗೀಡಾದವರು. ಹಂತಕ ಪತಿ ಪ್ರವೀಣ ಜಗಳೂರು ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ.

ನೇಣು ಬಿಗಿದ ಸ್ಥಿತಿಯಲ್ಲಿದ್ದ ಭಾಗ್ಯಶ್ರೀ ಅವರ ವಿಡಿಯೋ ಮಾಡಿ ಪತಿ ವಿಕೃತಿ ಮೆರೆದಿದ್ದಾನೆ. ಆ ವಿಡಿಯೋವನ್ನು ತನ್ನ ಸ್ನೇಹಿತರು ಹಾಗೂ ತಂದೆ, ತಾಯಿಗೂ ಕಳಿಸಿದ್ದಾನೆ ಎಂದು ಭಾಗ್ಯಶ್ರೀ ಅವರ ಪೋಷಕರು ಬೀಳಗಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ.

ಪತಿಯೊಂದಿಗಿನ ಮನಸ್ತಾಪದಿಂದ ನೊಂದು ಪತ್ನಿ ತನ್ನ ತವರು ಮನೆ ಇರುವ ಮಹಾಲಿಂಗಪುರಕ್ಕೆ ತೆರಳಿದ್ದರು. ಹಿರಿಯರು ತಿಳಿಹೇಳಿದ ಬಳಿಕ ಎರಡು ತಿಂಗಳ ನಂತರ ನಿನ್ನೆಯಷ್ಟೇ ಗಂಡನ ಮನೆಗೆ ಬಂದಿದ್ದರು. ಇಬ್ಬರ ನಡುವೆ ಕ್ಷುಲ್ಲಕ ಕಾರಣಕ್ಕೆ ಮತ್ತೆ ಜಗಳ ನಡೆದಿದೆ. ಮಾತಿಗೆ ಮಾತು ಬೆಳೆದು ವಿಕೋಪಕ್ಕೆ ಹೋಗಿ, ಕೋಪಗೊಂಡ ಆರೋಪಿ ಪತ್ನಿಗೆ ರಾಡ್‌ನಿಂದ ಹೊಡೆದು, ನೇಣು ಹಾಕಿ ಕೊಲೆ ಮಾಡಿದ್ದಾನೆ ಎಂದು


ಉದಯವಾಹಿನಿ ಚಿತ್ರ

ಮಹಿಳೆಯ ಪೋಷಕರು ಪೊಲೀಸರಿಗೆ ದೂರು ನೀಡಿದ್ದಾರೆ. ಆರು ವರ್ಷದ ಹಿಂದೆ ಇಬ್ಬರ ಮದುವೆಯಾಗಿದ್ದು, ದಂಪತಿಗೆ ಒಂದು ಗಂಡು ಮಗು ಇದೆ.ಘಟನಾ ಸ್ಥಳಕ್ಕೆ ಎಸ್ಪಿ ಸಿದ್ದಾರ್ಥ ಗೋಯಲ್, ಬೀಳಗಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು ತನಿಖೆ ಕೈಗೊಂಡಿದ್ದಾರೆ.ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್ ಪ್ರತಿಕ್ರಿಯೆ ನೀಡಿದ್ದು, ಪ್ರಕರಣ ಸಂಬಂಧ ಪತಿ ಪ್ರವೀಣ ಎಂಬವರನ್ನು ಈಗಾಗಲೇ ಬಂಧಿಸಲಾಗಿದೆ. ಪತ್ನಿ ಪ್ರಗತಿ ಉರ್ಫ್ ಭಾಗ್ಯಶ್ರೀ ಮೇಲೆ ಅನುಮಾನ ಹೊಂದಿದ್ದರಿಂದ ಇಬ್ಬರ ನಡುವೆ ಆಗ್ಗಾಗ್ಗೆ ಜಗಳ ನಡೆಯುತ್ತಿತ್ತು. ಮನಸ್ತಾಪದ ಇದ್ದುದರಿಂದ ಭಾಗ್ಯಶ್ರೀ ತನ್ನ ತವರು ಮನೆ ಮಹಾಲಿಂಗಪುರಕ್ಕೆ ತೆರಳಿದ್ದರು.

# ತಾಲ್ಲೂಕು ಜಿಲ್ಲಾ ಪಂಚಾಯ್ತಿ ಚುನಾವಣೆಗೆ ಸನ್ನದ್ಧರಾಗಿ : ಮೀನಳ್ಳಿ ತಾಯಣ್ಣ

• ಉದಯವಾಹಿನಿ, ಬಳ್ಳಾರಿ

ಮುಂಬರುವ ತಾಲ್ಲೂಕು, ಜಿಲ್ಲಾ ಪಂಚಾಯಿತಿ ಚುನಾವಣೆಗೆ ಕಾರ್ಯಕರ್ತರು ಸನ್ನದ್ಧರಾಗಬೇಕು, ಪಕ್ಷವನ್ನು ಮತ್ತಷ್ಟು ತಳಮಟ್ಟದಿಂದ ಸಂಘಟಿಸಿ ಎಲ್ಲರೂ ಸೇರಿ ಜೆಡಿಎಸ್ ಪಕ್ಷವನ್ನು ಅಧಿಕಾರಕ್ಕೆ ತರೋಣ ಎಂದು ಪಕ್ಷದ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಕಾರ್ಯಕರ್ತರಿಗೆ ಕರೆ ನೀಡಿದರು.

ಅವರು ನಿನ್ನೆ ನಗರದ ಜೆಡಿಎಸ್ ಜಿಲ್ಲಾ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಬಳ್ಳಾರಿ ಗ್ರಾಮಾಂತರ ಹಾಗೂ ನಗರ ಅಧ್ಯಕ್ಷರ ಹಾಗೂ ಜಿಲ್ಲಾ ವಿದ್ಯಾರ್ಥಿ ಘಟಕದ ಅಧ್ಯಕ್ಷರ ನೇಮಕಾತಿ ಆದೇಶ ಪತ್ರ ವಿತರಣೆ ಸಮಾರಂಭದಲ್ಲಿ ಮಾತನಾಡಿದರು. ವಿಸಿಟಿಂಗ್ ಕಾರ್ಡ್ ಅಧ್ಯಕ್ಷರು ನಮಗೆ ಬೇಡ, ಪಕ್ಷದ ತತ್ವ ಸಿದ್ಧಾಂತಗಳನ್ನು ಪಾಲಿಸುವ, ಪಕ್ಷದ ಬಲವರ್ಧನೆಗೆ ಪ್ರಾಮಾಣಿಕವಾಗಿ ಶ್ರಮಿಸಲು ಮುಂದಾಗಬೇಕು, ಬರುವ ದಿನಗಳಲ್ಲಿ ಜೆಡಿಎಸ್ ಮತ್ತೆ ಅಧಿಕಾರಕ್ಕೆ ಬರುವುದು ಶತ ಸಿದ್ಧ, ಮತ್ತೆ ನಮ್ಮ ಕುಮಾರಣ್ಣನವರೇ ರಾಜ್ಯದ ಮುಖ್ಯಮಂತ್ರಿಯಾಗಲಿದ್ದಾರೆ ಇದರಲ್ಲಿ ಅನುಮಾನವೇ



ಬೇಡ, ಕಾರ್ಯಕರ್ತರು, ಪದಾಧಿಕಾರಿಗಳು ಪಕ್ಷದ ಸಂಘಟನೆಗೆ ಸನ್ನದ್ಧರಾಗಬೇಕು, ನಮ್ಮ ಪಕ್ಷ ಅಧಿಕಾರಕ್ಕೆ ಬರುವರೆಗೂ ಎಲ್ಲರೂ ಶ್ರಮಿಸೋಣ ಎಂದರು.

ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಅಧ್ಯಕ್ಷರಾಗಿ ರಾಜಶೇಖರ್ ಗೌಡ, ಬಳ್ಳಾರಿ ಜಿಲ್ಲಾ ವಿದ್ಯಾರ್ಥಿ ಘಟಕದ ಜಿಲ್ಲಾಧ್ಯಕ್ಷರಾಗಿ ಆರ್.ರಾಕೇಶ್ ಅವರನ್ನು ನೇಮಕ ಮಾಡಲಾಗಿದೆ.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಯಲ್ಲನಗೌಡ, ಉಪಾಧ್ಯಕ್ಷ ವಿಜಯಕುಮಾರ್ ಮದಿರೆ, ಚಾಗನೂರು ನಾಗರಾಜ್, ಬಸಪ್ಪ, ಅಶೋಕ ಸಂಗನಕಲ್ಲು, ವೀರೇಶ್, ಹೊನ್ನೂರು ಅಲಿ, ಜಮೀಲಾ, ಶಬಾನಾ, ರಹೆಮತ್, ಜಯಲಕ್ಷ್ಮೀ, ಶಮೀಮ್ ಬಾನು, ಲಕ್ಷ್ಮೀ ಸೇರಿದಂತೆ ವಿವಿಧ ಕಾರ್ಯಕರ್ತರು ಭಾಗವಹಿಸಿದ್ದರು.

# ಉತ್ತರ ಕನ್ನಡ: ರೇಟಿಂಗ್ ಹೆಸರಿನಲ್ಲಿ ಮಹಿಳೆಯಿಂದ 5 ಲಕ್ಷ ದೋಚಿದ ಸೈಬರ್ ವಂಚಕರು

• ಉದಯವಾಹಿನಿ, ಉತ್ತರ ಕನ್ನಡ

ಸಿದ್ದಾಪುರ ಮತ್ತು ಕುಮಟಾದಲ್ಲಿ ಎರಡು ವಿಭಿನ್ನ ಅಪರಾಧ ಪ್ರಕರಣಗಳು ಬೆಳಕಿಗೆ ಬಂದಿವೆ. ಒಂದೆಡೆ ಆನ್‌ಲೈನ್ ಟಾಸ್ಕ್ ಹೆಸರಿನಲ್ಲಿ 5 ಲಕ್ಷ ರೂ. ದೋಚಿದ್ದರೆ, ಮತ್ತೊಂದೆಡೆ ಮನೆ ಮುಂದೆಯೇ ಗಾಂಜಾ ಸೇವಿಸುತ್ತಿದ್ದ ಯುವಕನನ್ನು ಪೊಲೀಸರು ಬಂಧಿಸಿದ್ದಾರೆ.ಹಲೋ ಐ ಆಮ್ ಸಾನಿಯಾ ಎಂದೇ 5.14 ಲಕ್ಷ ಗುಳುಂ ಸಿದ್ದಾಪುರದ ಹೊಸೂರು ಕಾನಕೇರಿಯಲ್ಲಿ ಬೇಕರಿ ನಡೆಸುತ್ತಿರುವ ಮೂಲತಃ ಹಾಸನದ ಎಸ್.ಎಸ್. ಅರ್ಪಿತಾ ಅವರು ಸೈಬರ್ ವಂಚನೆಗೊಳಗಾಗಿದ್ದಾರೆ. ಜುಲೈ 21 ರಂದು ಬೇಕರಿಯಲ್ಲಿ ವ್ಯಾಪಾರ ಮಾಡುತ್ತಿದ್ದಾಗ ಅವರ ವಾಟ್ಸ್ ಆಪ್‌ಗೆ ಹಲೋ ಐ ಆಮ್ ಸಾನಿಯಾ ಎಂದು ಮೆಸೇಜ್ ಬಂದಿದೆ. ನಾವು ಹೇಳಿದ ರೆಸ್ಟೋರೆಂಟ್‌ಗಳಿಗೆ 5 ಸ್ಟಾರ್ ರೇಟಿಂಗ್ ಕೊಟ್ಟರೆ ಪ್ರತಿ ರೇಟಿಂಗ್‌ಗೆ 50 ರೂಪಾಯಿ ಕೊಡುತ್ತೇವೆ, ಟಾಸ್ಕ್ ಮಾಡಿದರೆ ಸಾಕು ಎಂದು ನಂಬಿಸಿದ್ದಾಳೆ.

ಇದನ್ನು ನಿಜವೆಂದು ನಂಬಿದ ಅರ್ಪಿತಾ, ಆರಂಭದಲ್ಲಿ ಸಣ್ಣ ಮೊತ್ತದ ಲಾಭ ಬಂದಿದ್ದರಿಂದ 11 ಟಾಸ್ಕ್‌ಗಳನ್ನು ಪೂರ್ಣಗೊಳಿಸಿದ್ದಾರೆ.

ನಂತರ ಹೆಚ್ಚಿನ ಹಣ ಹೂಡಿಕೆ ಮಾಡುವಂತೆ ಸಾನಿಯಾ ಒತ್ತಾಯಿಸಿದ್ದು, ಇದೇ ವೇಳೆ ಅರ್ಪಿತಾ ಅವರ ಬ್ಯಾಂಕ್ ಖಾತೆಯಿಂದ ರೂ. 5,14,249 ಹಣವನ್ನು ದುಷ್ಕರ್ಮಿಗಳು ವರ್ಗಾವಣೆ ಮಾಡಿಕೊಂಡು ವಂಚಿಸಿದ್ದಾರೆ. ಹಣ ಕಳೆದುಕೊಂಡಿರುವುದು ಅರಿವಾದ ನಂತರ ಅರ್ಪಿತಾ ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಕುಮಟಾ ತಾಲೂಕಿನ ಸೊಪ್ಪಿನಹೊಸಳ್ಳಿ ಮೂಡಗಿಯ ರಜತ ಭಾಸ್ಕರ ನಾಯಕ (30 ವರ್ಷ) ಎಂಬ ಯುವಕನನ್ನು ಕುಮಟಾ ಪೊಲೀಸರು ಗಾಂಜಾ ಸೇವನೆ ಆರೋಪದ ಮೇಲೆ ಬಂಧಿಸಿದ್ದಾರೆ.

# ಹಾವೇರಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸ್ಥಾನ ಎಸ್‌ಸಿ, ಎಸ್‌ಟಿ ಸಮುದಾಯಕ್ಕೆ ನೀಡಿ: ಜಿಲ್ಲಾ ಉಪಾಧ್ಯಕ್ಷ ಬಸವರಾಜ ಹೆಡಿಗ್ಗೊಂಡ ಮನವಿ

• ಉದಯವಾಹಿನಿ, ಮಂಗಳೂರು

ಬ್ಯಾಡಗಿ ಹಾವೇರಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಸ್ಥಾನವನ್ನು ಈ ಬಾರಿ ಎಸ್.ಸಿ, ಎಸ್.ಟಿ ಸಮುದಾಯಕ್ಕೆ ನೀಡಬೇಕು ಎಂದು ಒತ್ತಾಯಿಸಿ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಸವರಾಜ ಹೆಡಿಗ್ಗೊಂಡ ಅವರು ಪಕ್ಷದ ಹೈಕಮಾಂಡ್‌ಗೆ ಮನವಿ ಸಲ್ಲಿಸಿದ್ದಾರೆ. ಬ್ಯಾಡಗಿಯಲ್ಲಿ ನಡೆದ ಸಂಘಟನಾ ಸೃಜನ್ ಅಭಿಯಾನ ಕಾರ್ಯಕ್ರಮದಲ್ಲಿ ಹಾವೇರಿ ಜಿಲ್ಲಾ ಕಾಂಗ್ರೆಸ್ ಉಸ್ತುವಾರಿ, ಮಾಜಿ ಶಾಸಕ ಶೇಖ್ ಮುಸ್ತಾನವಲಿ ಅವರಿಗೆ ಮನವಿ ಪತ್ರ ಸಲ್ಲಿಸಲಾಗಿದೆ.

ಹಾವೇರಿ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವು ಇಲ್ಲಿಯವರೆಗೆ ಎಸ್‌ಸಿ, ಎಸ್‌ಟಿ ಸಮುದಾಯಕ್ಕೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನ ದೊರೆತಿಲ್ಲ. ಈ ಹಿನ್ನೆಲೆಯಲ್ಲಿ ಪಕ್ಷದ ನಿಷ್ಠಾವಂತ ಕಾರ್ಯಕರ್ತರಿಗೆ ಅವಕಾಶ


ಉದಯವಾಹಿನಿ ಚಿತ್ರ

ಕಲ್ಪಿಸುವ ನಿಟ್ಟಿನಲ್ಲಿ ಈ ಬಾರಿ ಎಸ್‌ಸಿ, ಎಸ್‌ಟಿ ಸಮುದಾಯದವರಿಗೆ ಜಿಲ್ಲಾಧ್ಯಕ್ಷ ಸ್ಥಾನ ನೀಡಬೇಕು ಎಂದು ಬಸವರಾಜ ಹೆಡಿಗ್ಗೊಂಡ ಮನವಿ ಮಾಡಿದರು. ತಾವು ಕಳೆದ ಮೂರು ದಶಕಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆ ಹಾಗೂ ಬಲವರ್ಧನೆಗಾಗಿ ನಿರಂತರವಾಗಿ ಸೇವೆ ಸಲ್ಲಿಸುತ್ತಿದ್ದು, ಪ್ರಸ್ತುತ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷರಾಗಿ ಪಕ್ಷದ ಜವಾಬ್ದಾರಿ ನಿರ್ವಹಿಸುತ್ತಿದ್ದೇನೆ. ಪಕ್ಷದ ತಳಮಟ್ಟದ ಕಾರ್ಯಕರ್ತರೊಂದಿಗೆ ನಿರಂತರ ಸಂಪರ್ಕ ಹೊಂದಿರುವ ತಮ್ಮನ್ನು ಪರಿಗಣಿಸಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನ ನೀಡುವಂತೆ ಹೈಕಮಾಂಡ್‌ಗೆ ಶಿಫಾರಸು ಮಾಡಬೇಕು ಎಂದು ಹಾವೇರಿ ಜಿಲ್ಲಾ ಕಾಂಗ್ರೆಸ್ ಉಸ್ತುವಾರಿ, ಮಾಜಿ ಶಾಸಕ ಶೇಖ್ ಮುಸ್ತಾನವಲಿ ಅವರಿಗೆ ಮನವಿ ಮಾಡಿದರು. ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಮತ್ತಷ್ಟು ಸಂಘಟನಾತ್ಮಕವಾಗಿ ಬಲಪಡಿಸಲು ಸಾಮಾಜಿಕ ನ್ಯಾಯದ ಆಶಯದಂತೆ ಸಮುದಾಯಗಳಿಗೂ ಸೂಕ್ತ ಪ್ರಾತಿನಿಧ್ಯ ದೊರೆಯಬೇಕಿದೆ. ಈ ನಿಟ್ಟಿನಲ್ಲಿ ಎಸ್‌ಸಿ ಸಮುದಾಯದ ಪಕ್ಷದ ಹಿರಿಯ ಹಾಗೂ ನಿಷ್ಠಾವಂತ ಕಾರ್ಯಕರ್ತರಿಗೆ ಜಿಲ್ಲಾ ಅಧ್ಯಕ್ಷ ಸ್ಥಾನ ನೀಡುವುದರಿಂದ ಪಕ್ಷದ ಸಂಘಟನೆಗೆ ಮತ್ತಷ್ಟು ಬಲ ಬರಲಿದೆ.

# ತಮಿಳುನಾಡಿಗೆ ನೀರು ಬಿಡುವ ಕುರಿತು ಸಿಎಂ ಡಿಕೆಶಿ ನಿರ್ಧಾರವೇ ಅಂತಿಮ: ಸಚಿವ ಯತೀಂದ್ರ ಸಿದ್ದರಾಮಯ್ಯ

• ಉದಯವಾಹಿನಿ, ಬೆಳಗಾವಿ

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ತಮಿಳುನಾಡಿಗೆ ನೀರು ಬಿಡಲು ಹೇಳಿದೆ. ಹೀಗಾಗಿ, ತಮಿಳುನಾಡಿಗೆ ನೀರನ್ನು ಕೊಡಬೇಕಾದ ಅನಿವಾರ್ಯತೆ ನಮಗಿದೆ. ಮುಖ್ಯಮಂತ್ರಿಗಳು ಏನೂ ಹೇಳುತ್ತಾರೆ, ಅದರ ಮೇಲೆ ನಿಂತಿದೆ ಎಂದು ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿದರು.ಬೆಳಗಾವಿ ಕಾಂಗ್ರೆಸ್ ಭವನದಲ್ಲಿ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಮಳೆ ಕಮ್ಮಿಯಾಗಿ ಕಾವೇರಿ ನದಿಯಲ್ಲಿ ನೀರು ಕಡಿಮೆಯಾಗಿದೆ. ಆದರೆ, ನಾವು ಕಾವೇರಿ ನೀರು ನಿರ್ವಹಣಾ ಮಂಡಳಿ ಮಾಡಿಕೊಂಡಿದ್ದೇವೆ. ಅವರು ಏನು ತೀರ್ಮಾನ ತೆಗೆದುಕೊಳ್ಳುತ್ತಾರೆ, ಅದಕ್ಕೆ ನಾವು ಬದ್ಧವಾಗಬೇಕಾಗುತ್ತದೆ. ಕುಡಿಯುವ ನೀರು ಇಟ್ಟುಕೊಂಡು ತಮಿಳುನಾಡಿಗೆ ಕೊಡಬೇಕಾಗುತ್ತದೆ.



ಆದರೂ ಮುಖ್ಯಮಂತ್ರಿಗಳು ಏನೂ ಹೇಳುತ್ತಾರೆ ಅದೇ ಅಂತಿಮ ಎಂದು ಪುನರುಚ್ಚರಿಸಿದರು.

ನೀರು ಬಿಡುವ ವಿಚಾರ ಕೋರ್ಟ್‌ನಲ್ಲಿ ವಾದ ಮಾಡುವುದು ಅಲ್ಲ, ನೀರಿನ ಪರಿಸ್ಥಿತಿ ನೋಡಿ ನೀರು ಬಿಡುವುದು. ಈ ವಿಷಯದಲ್ಲಿ ನಮ್ಮ ಕೈ ಕಟ್ಟಿ ಹಾಕಿದಂತಿದೆ. ಜಲ ತಜ್ಞರು ಅಭಿಪ್ರಾಯ ತಿಳಿಸಿದ ಆಧಾರದ ಮೇಲೆ ನೀರು ಬಿಡಬೇಕು. ನಾನು ಇದರ ಬಗ್ಗೆ ಚರ್ಚೆ ಮಾಡುವುದಿಲ್ಲ. ಕಾವೇರಿ ಪ್ರಾಧಿಕಾರ ಹೇಳಿದ್ದಕ್ಕೆ ಸರ್ಕಾರ ಬದ್ಧವಾಗಬೇಕು. ಅಂತಿಮವಾಗಿ ಮುಖ್ಯಮಂತ್ರಿಗಳು ಏನು ನಿರ್ಧಾರ ತೆಗೆದುಕೊಳ್ಳುತ್ತಾರೆ ನೋಡಬೇಕು ಎಂದು ಯತೀಂದ್ರ ಸಿದ್ದರಾಮಯ್ಯ ಹೇಳಿದರು. ಬೆಳಗಾವಿಯಲ್ಲಿ ಜಿಲ್ಲಾ ಅಹಿಂದ ನಾಯಕರ ಸಭೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಯತೀಂದ್ರ ಸಿದ್ದರಾಮಯ್ಯ, ಇಂದಿನ ಸಭೆಯಲ್ಲಿ ನಾನು ಭಾಗವಹಿಸುತ್ತೇನೆ ಎಂದ ಅವರು, ಅಹಿಂದ ನಾಯಕತ್ವ ಯಾರು ವಹಿಸಿಕೊಳ್ತಾರೆ ಎಂಬುದಕ್ಕೆ ತಂದೆಯವರು ಈಗಲೂ ಇದ್ದಾರೆ. ಸಕ್ರಿಯ ರಾಜಕಾರಣದಲ್ಲಿ ಇರುತ್ತೇನೆ ಅಂತಾ ಹೇಳಿದ್ದಾರೆ.

## ಮಿನಿ ನ್ಯೂಸ್

### ಬಂಟ್ವಾಳ ಲಾವಣ್ಯ ಕೊಲೆ ಪ್ರಕರಣ: 11 ದಿನಗಳ ಚಿಕಿತ್ಸೆಯ ಬಳಿಕ ಆರೋಪಿ ಪೊಲೀಸ್ ಕಸ್ಟಡಿಗೆ

• ಉದಯವಾಹಿನಿ, ಬಂಟ್ವಾಳ

ಜುಲೈ 16ರಂದು ಬಿ. ಸಿ. ರೋಡ್ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದಲ್ಲಿ ಬಂಟ್ವಾಳ ತಾಲ್ಲೂಕಿನ ಉಳಿ ಗ್ರಾಮದ ಕಕ್ಯಪದವು ನಿವಾಸಿ ಲಾವಣ್ಯ (21) ಹತ್ಯೆ ಪ್ರಕರಣದ ಆರೋಪಿಯನ್ನು ಮಂಗಳವಾರ ಪೊಲೀಸರು ಬಂಟ್ವಾಳ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಲಯ ಆತನನ್ನು ಮೂರು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ಒಪ್ಪಿಸಿದೆ.

ಆರೋಪಿ ಚೇತನ್ (22) ವಿಷ ಸೇವಿಸಿದ ಹಿನ್ನೆಲೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ. ಇದೀಗ ಚೇತರಿಸಿಕೊಂಡಿದ್ದು, ಆರೋಪಿಯನ್ನು ಬಂಟ್ವಾಳ ನಗರ ಪೊಲೀಸ್ ವಶಕ್ಕೆ ಒಪ್ಪಿಸಲಾಯಿತು.ಲಾವಣ್ಯ ಅವರ ಮೇಲೆ ಬೆಳ್ತಂಗಡಿ ತಾಲ್ಲೂಕಿನ ಓಡಿಲ್ನಾಳ ನಿವಾಸಿ ಚೇತನ್ ಮಾರಕಾಸ್ತ್ರದಿಂದ ಹಲ್ಲೆ ನಡೆಸಿ ಹತ್ಯೆಗೈದಿದ್ದ. ಕೊಲೆ ಬಳಿಕ ಆತ ಕಾರಿನಲ್ಲಿ ಸ್ಥಳದಿಂದ ಪರಾರಿಯಾಗಿದ್ದನು.

ಘಟನೆಯ ಮರುದಿನ ಮಂಗಳೂರು ನಗರದ ಪಚ್ಚನಾಡಿ ಪ್ರದೇಶದಲ್ಲಿ ಆರೋಪಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದರು. ಆದರೆ, ಆ ವೇಳೆ ವಿಷಕಾರಿ ಪದಾರ್ಥ ಸೇವಿಸಿದ ಬಗ್ಗೆ ಆತ ಹೇಳಿದ ಹಿನ್ನೆಲೆಯಲ್ಲಿ ಮೊದಲು ಬಂಟ್ವಾಳ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ಕೊಡಿಸಲಾಗಿತ್ತು. ನಂತರ ವೈದ್ಯರ ಸಲಹೆಯಂತೆ ಹೆಚ್ಚಿನ ಚಿಕಿತ್ಸೆಗಾಗಿ ಮಂಗಳೂರಿನ ವೆನ್ಲಾಕ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿತ್ತು. ವೆನ್ಲಾಕ್ ಆಸ್ಪತ್ರೆಯಲ್ಲಿ ಆರಂಭದಲ್ಲಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗಿದ್ದು, ಆರೋಗ್ಯದಲ್ಲಿ ಸುಧಾರಣೆ ಕಂಡುಬಂದ ಬಳಿಕ ಸಾಮಾನ್ಯ ವಾರ್ಡ್‌ಗೆ ಸ್ಥಳಾಂತರಿಸಲಾಗಿತ್ತು. ಕಳೆದ 11 ದಿನಗಳಿಂದ ಚಿಕಿತ್ಸೆ ಪಡೆಯುತ್ತಿದ್ದ ಆರೋಪಿಯ ಆರೋಗ್ಯ ಸ್ಥಿರವಾಗಿದೆ ಎಂದು ವೈದ್ಯರು ತಿಳಿಸಿದ್ದರು.

**ಆರೋಪಿಯ ಆರೋಗ್ಯ ಸ್ಥಿರವಾಗಿದೆ**

### ನ್ಯಾಯಬೆಲೆ ಅಂಗಡಿ ಸಮಯ ಪಾಲನೆಗೆ ವೀಕಸೇ

• ಉದಯವಾಹಿನಿ, ಜೇವರಗಿ

ತಾಲ್ಲೂಕಿನಲ್ಲಿರುವ ನ್ಯಾಯಬೆಲೆ ಅಂಗಡಿಗಳು ಸರ್ಕಾರ ನಿಗದಿಪಡಿಸಿದ ಸಮಯ ಪಾಲನೆ ಮಾಡಬೇಕೆಂದು ಜೇವರ್ಗಿ ಆಹಾರ ನಿರೀಕ್ಷಣಾಧಿಕಾರಿಗಳಿಗೆ ವೀರ ಕನ್ನಡಿಗರ ಸೇನೆ ಮನವಿ ಪತ್ರ ಸಲ್ಲಿಸಿದೆ. ಸರ್ಕಾರ ಕಳೆದ ತಿಂಗಳು ಹೊರಡಿಸಲಾದ ಆದೇಶದಂತೆ ಪ್ರತಿ ದಿನ ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ನ್ಯಾಯಬೆಲೆ ಅಂಗಡಿಗಳು ತೆರೆದಿರಬೇಕೆಂದು ಸರ್ಕಾರ ಸಮಯ ನಿಗದಿ ಮಾಡಿದೆ ಇದರಿಂದ ಗ್ರಾಮೀಣ ಪ್ರದೇಶದ ಜನ ತಮ್ಮ ಕೃಷಿ ಕೆಲಸಕ್ಕೆ ಹೋಗುವ ಮುಂಚೆ ಬೆಳಿಗ್ಗೆ ಆಹಾರ ಪದಾರ್ಥ (ರೇಷನ್)ತೆಗೆದುಕೊಂಡು ಹೋಗಬಹುದು ಹಾಗೆಯೇ ಕೃಷಿ ಕೆಲಸ ಮುಗಿಸಿ ಬಂದು ರಾತ್ರಿ ಸಮಯದಲ್ಲಿಯು ಸಹ ರೇಷನ್ ತೆಗೆದುಕೊಳ್ಳಬಹುದು ಜೊತೆಗೆ ನಗರ ಪ್ರದೇಶದಲ್ಲಿರುವವರು ಸಹ ತಮ್ಮ ಕೆಲಸಕ್ಕೆ ಹೋಗುವ ಮೊದಲು ಕೆಲಸ ಮುಗಿದ ನಂತರವೂ ಸಹ ರೇಷನ್ ತೆಗೆದುಕೊಂಡು ಹೋಗಲು ಅನುಕೂಲವಾಗಿದೆ ಯಾವ ನ್ಯಾಯಬೆಲೆ ಅಂಗಡಿ ಸಮಯ ಪಾಲನೆ ಮಾಡುವುದಿಲ್ಲವೋ ಅಂತಹ ನ್ಯಾಯಬೆಲೆ ಅಂಗಡಿಯವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು.

### ಪಟ್ಟಾ ಜಮೀನುಗಳಿಗೆ 'ಭೋಜಾ' ಅಸ್ತ್ರ: 76.46 ಕೋಟಿ ರಾಯಲ್ಟಿ ನಷ್ಟ

• ಉದಯವಾಹಿನಿ, ಯಾದಗಿರಿ

ಪಟ್ಟಾ ಜಮೀನುಗಳಲ್ಲಿ ಅನಧಿಕೃತವಾಗಿ ಸುಣ್ಣದ ಕಲ್ಲು, ಮರಮ್ ಗಣಿಗಾರಿಕೆ ನಡೆಸಿ ಹಾಗೂ ಅಕ್ರಮವಾಗಿ ನದಿಯ ಮರಳು ದಾಸ್ತಾನು ಮಾಡಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ತಂದಿರಿಸಿದ 118 ಜಮೀನುಗಳ ಮಾಲೀಕರ ಪಹಣಿಗಳಲ್ಲಿ 76.46 ಕೋಟಿ ರಾಯಲ್ಟಿಯ 'ಭೋಜಾ' ಸೇರಿಸಲು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಮುಂದಾಗಿದೆ.ಶಹಾಪುರ, ಸುರಪುರ ಮತ್ತು ವಡಗೇರಾ ತಾಲ್ಲೂಕುಗಳಲ್ಲಿ ಅಕ್ರಮ ಮರಳು, ಮರಮ್ ಹಾಗೂ ಸುಣ್ಣದ ಕಲ್ಲು ಗಣಿಗಾರಿಕೆ ಅವ್ಯಾಹತವಾಗಿ ನಡೆಯುತ್ತಿದೆ. ಪ್ರಕರಣಗಳು ದಾಖಲಿಸಿದರೂ ಅಕ್ರಮಗಳಿಗೆ ಕಡಿವಾಣ ಬೀಳುತ್ತಿಲ್ಲ. ಹೀಗಾಗಿ, ಗಣಿ ಇಲಾಖೆಯ ಅಧಿಕಾರಿಗಳು ಸರ್ಕಾರದ ಬೊಕ್ಕಸಕ್ಕೆ ಆಗಿರುವ ರಾಯಲ್ಟಿ ನಷ್ಟದ ಮೊತ್ತವನ್ನು ಜಮೀನುಗಳ ಮಾಲೀಕರ ಮೇಲೆ ಹೊರಿಸಲು ಸಜ್ಜಾಗಿದ್ದಾರೆ.ಶಹಾಪುರ ತಾಲ್ಲೂಕಿನ ಇಬ್ರಾಹಿಂಪುರ, ದೋರನಹಳ್ಳಿ, ಚಟ್ನಳ್ಳಿ ಹಾಗೂ ಹುರಸಗುಂಡಗಿ ಗ್ರಾಮಗಳ 49 ಪಟ್ಟಾ ಜಮೀನುಗಳಲ್ಲಿ 7.68 ಲಕ್ಷ ಮೆಟ್ರಿಕ್ ಟನ್ ಮರಮ್ ಅಕ್ರಮವಾಗಿ ತೆಗೆಯಲಾಗಿದೆ. ಇದರಿಂದ ಸರ್ಕಾರಕ್ಕೆ 26.88 ಕೋಟಿ ರಾಯಲ್ಟಿ ನಷ್ಟವಾಗಿದೆ.

### ಗಂಗಾವತಿಯ ಲಿಟಲ್ ಹಾರ್ಟ್ಸ್ ಶಾಲೆಯಲ್ಲಿ ಸಂಸತ್ ಚುನಾವಣೆ ಯಶಸ್ವಿ

• ಉದಯವಾಹಿನಿ, ಗಂಗಾವತಿ

ಇಲ್ಲಿನ ಲಿಟಲ್ ಹಾರ್ಟ್ಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವದ ಮೌಲ್ಯ, ಮತದಾನ ಮಹತ್ವ ತಿಳಿಯಪಡಿಸುವ ಉದ್ದೇಶದಿಂದ ಈಚೆಗೆ ಸಂಸತ್ ಚುನಾವಣೆ ಜರುಗಿತು. ಶಾಲಾ ಸಂಸತ್ತಿನ ಒಟ್ಟು 10 ವಿವಿಧ ಸ್ಥಾನಗಳಿಗೆ 103 ವಿದ್ಯಾರ್ಥಿಗಳು ನಾಮ ಪತ್ರ ಸಲ್ಲಿಕೆ ಮಾಡಿದ್ದರು. ಕಣದಲ್ಲಿದ್ದ 33 ಅಭ್ಯರ್ಥಿಗಳು ತಮ್ಮ ನಾಮಪತ್ರ ಹಿಂಪಡೆದಿದ್ದು, ಅಂತಿಮವಾಗಿ 70 ಅಭ್ಯರ್ಥಿಗಳು ಸ್ಪರ್ಧಿಸಿದರು. ಚುನಾವಣೆಯಲ್ಲಿ 6ನೇ ತರಗತಿಯಿಂದ 10ನೇ ತರಗತಿವರೆಗೆ 700 ವಿದ್ಯಾರ್ಥಿಗಳು ಮತ ಚಲಾಯಿಸಿದರು. ಈ ಮತದಾನ ಪ್ರಕ್ರಿಯೆ ಎಲೆಕ್ಟ್ರಾನಿಕ್ ವೋಟಿಂಗ್ ಮಿಷನ್ ಮೂಲಕ ನಡೆಯಿತು. ಚುನಾವಣೆಗೆ ಭಾರತ ಚುನಾವಣಾ ಆಯೋಗದ ಮಾದರಿಯಲ್ಲೇ ಶಾಲಾ ಆಡಳಿತ ಮಂಡಳಿ ಚುನಾವಣಾಧಿಕಾರಿಗಳನ್ನ ನೇಮಿಸಿ. ಮತದಾನ ನಡೆಸಿತು. ವಿದ್ಯಾರ್ಥಿಗಳು ಉತ್ಸಾಹದಿಂದ ಸಾಲಿನಲ್ಲಿ ನಿಂತು ತಮ್ಮ ಅಮೂಲ್ಯ ಮತ ಚಲಾಯಿಸಿ, ನೆಚ್ಚಿನ ಅಭ್ಯರ್ಥಿಗಳಿಗೆ ಬೆಂಬಲ ಸೂಚಿಸಿದರು.

# ಹುಬ್ಬಳ್ಳಿ, ರಾಮೇಶ್ವರಂ ನಡು ವಿಶೇಷ ಎಕ್ಸ್‌ಪ್ರೆಸ್ ರೈಲು ಸೇವೆ!

## ಕೊಟ್ಟಾಯಂ ನಡುವೆ ವಿಶೇಷ ರೈಲುಗಳ ಸಂಚಾರಕ್ಕೆ ರೈಲ್ವೆ ಮಂಡಳಿಯು ಅನುಮೋದನೆ ನೀಡಿದೆ

• ಉದಯವಾಹಿನಿ, ಹುಬ್ಬಳ್ಳಿ

ಮುಂಬರಲಿರುವ ಓಣಂ ಹಬ್ಬದ ಪ್ರಯುಕ್ತ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿಯಂತ್ರಿಸಲು, ಶ್ರೀ ಸಿದ್ಧಾರೂಢ ಸ್ವಾಮೀಜಿ ಹುಬ್ಬಳ್ಳಿ (ಎಸ್‌ಎಸ್‌ಎಸ್ ಹುಬ್ಬಳ್ಳಿ) ಮತ್ತು ಕೊಟ್ಟಾಯಂ ನಡುವೆ ವಿಶೇಷ ರೈಲುಗಳ ಸಂಚಾರಕ್ಕೆ ರೈಲ್ವೆ ಮಂಡಳಿಯು ಅನುಮೋದನೆ ನೀಡಿದೆ.

1 ರೈಲು ಸಂಖ್ಯೆ 07351/07352 ಎಸ್‌ಎಸ್‌ಎಸ್
2 ರೈಲು ಸಂಖ್ಯೆ 07353/07354 ಎಸ್‌ಎಸ್‌ಎಸ್
3 ಶ್ರೀ ಮಹದೇವಪ್ಪ ಮೈಲಾರ ರೈಲ್ವೆ ನಿಲ್ದಾಣ

**ರೈಲು ಸಂಖ್ಯೆ 07351 ಎಸ್‌ಎಸ್‌ಎಸ್ ಹುಬ್ಬಳ್ಳಿ ಕೊಟ್ಟಾಯಂ ವಿಶೇಷ**

ಎಕ್ಸ್‌ಪ್ರೆಸ್ ಆಗಸ್ಟ್ 25, 2026 (ಮಂಗಳವಾರ) ರಂದು ಸಂಜೆ 6:30 ಗಂಟೆಗೆ ಎಸ್ ಎಸ್‌ಎಸ್ ಹುಬ್ಬಳ್ಳಿಯಿಂದ ಹೊರಟು, ಬುಧವಾರ ಸಂಜೆ 04:40 ಗಂಟೆಗೆ ಕೊಟ್ಟಾಯಂ ತಲುಪಲಿದೆ. ಹಿಂತಿರುಗುವ ಮಾರ್ಗದಲ್ಲಿ, ರೈಲು ಸಂಖ್ಯೆ 07352 ಕೊಟ್ಟಾಯಂ ಎಸ್ ಎಸ್‌ಎಸ್ ಹುಬ್ಬಳ್ಳಿ ವಿಶೇಷ ಎಕ್ಸ್‌ಪ್ರೆಸ್ ಆಗಸ್ಟ್ 26, 2026 (ಬುಧವಾರ) ರಂದು ರಾತ್ರಿ 10:30 ಗಂಟೆಗೆ ಕೊಟ್ಟಾಯಂನಿಂದ ಹೊರಟು, ಗುರುವಾರ ರಾತ್ರಿ 8:00 ಗಂಟೆಗೆ ಎಸ್ ಎಸ್ ಹುಬ್ಬಳ್ಳಿಗೆ ಆಗಮಿಸಲಿದೆ. ರೈಲು ಸಂಖ್ಯೆ 07353 ಎಸ್‌ಎಸ್‌ಎಸ್ ಹುಬ್ಬಳ್ಳಿ ಕೊಟ್ಟಾಯಂ ವಿಶೇಷ ಎಕ್ಸ್‌ಪ್ರೆಸ್ ರೈಲು ಆಗಸ್ಟ್ 29, 2026 (ಶನಿವಾರ) ರಂದು ಮಧ್ಯಾಹ್ನ



03:15 ಗಂಟೆಗೆ ಎಸ್‌ಎಸ್‌ಎಸ್ ಹುಬ್ಬಳ್ಳಿಯಿಂದ ಹೊರಟು, ಭಾನುವಾರ ಸಂಜೆ 04:15 ಗಂಟೆಗೆ ಕೊಟ್ಟಾಯಂ ತಲುಪಲಿದೆ. ವಾಪಸ್, ರೈಲು ಸಂಖ್ಯೆ 07354 ಕೊಟ್ಟಾಯಂ ಎಸ್‌ಎಸ್‌ಎಸ್ ಹುಬ್ಬಳ್ಳಿ ವಿಶೇಷ ಎಕ್ಸ್‌ಪ್ರೆಸ್ ರೈಲು ಆಗಸ್ಟ್ 30, 2026 (ಭಾನುವಾರ) ರಂದು 10:30 ಗಂಟೆಗೆ ಕೊಟ್ಟಾಯಂನಿಂದ ಹೊರಟು, ಸೋಮವಾರ 08:05 ಗಂಟೆಗೆ ಎಸ್‌ಎಸ್‌ಎಸ್ ಹುಬ್ಬಳ್ಳಿಗೆ ಆಗಮಿಸಲಿದೆ.ಈ ರೈಲುಗಳು ಎರಡೂ ಮಾರ್ಗಗಳಲ್ಲಿ ಶ್ರೀ ಮಹದೇವಪ್ಪ ಮೈಲಾರ ರೈಲ್ವೆ ನಿಲ್ದಾಣ ಹಾವೇರಿ, ದಾವಣಗೆರೆ,

ಈ ಮೇಲಿನ ರೈಲುಗಳು ವಿಸ್ತರಿಸಲಾದ ಅವಧಿಯಲ್ಲಿ ಪ್ರಸ್ತುತ ಇರುವ ಸಮಯ, ನಿಲುಗಡೆಗಳು ಮತ್ತು ಬೋಗಿಗಳ ಸಂಯೋಜನೆಯೊಂದಿಗೆ ಹೆಚ್ಚುವರಿಯಾಗಿ 05 ಟ್ರಿಪ್‌ಗಳಲ್ಲಿ ಸಂಚರಿಸಲಿವೆ ಎಂದು ನೈರುತ್ಯ ರೈಲ್ವೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೀರೂರು, ಅರಸೀಕೆರೆ, ತುಮಕೂರು, ಎಸ್‌ಎಂವಿಟಿ ಬೆಂಗಳೂರು, ಕೃಷ್ಣರಾಜಪುರಂ, ಬಂಗಾರಪೇಟೆ, ಸೇಲಂ, ಈರೋಡ್, ತಿರುಪ್ಪೂರ್, ಪೋಡನೂರ್, ಪಾಲಕ್ಕಾಡ್, ತ್ರಿಶ್ಶೂರ್, ಆಲುವಾ ಮತ್ತು ಎರ್ನಾಕುಲಂ ನಿಲ್ದಾಣಗಳಲ್ಲಿ ನಿಲ್ಲಲಿವೆ.

ರೈಲು ಸಂಖ್ಯೆ 07355 ಎಸ್‌ಎಸ್‌ಎಸ್ ಹುಬ್ಬಳ್ಳಿ ರಾಮೇಶ್ವರಂ ಸಾಪ್ತಾಹಿಕ ವಿಶೇಷ ಎಕ್ಸ್‌ಪ್ರೆಸ್ ರೈಲು, ಈ ಮೊದಲು 26.07.2026 ರವರೆಗೆ ಸಂಚರಿಸಲಿದೆ ಎಂದು ತಿಳಿಸಲಾಗಿತ್ತು. ಈಗ ಈ ರೈಲಿನ ಸೇವೆಯನ್ನು 02.08.2026 ರಿಂದ 30.08.2026 ರವರೆಗೆ ವಿಸ್ತರಿಸಲಾಗಿದೆ. ಅದೇ ರೀತಿ, ರೈಲು ಸಂಖ್ಯೆ 07356 ರಾಮೇಶ್ವರಂ ಎಸ್‌ಎಸ್‌ಎಸ್ ಹುಬ್ಬಳ್ಳಿ ಸಾಪ್ತಾಹಿಕ ವಿಶೇಷ ಎಕ್ಸ್‌ಪ್ರೆಸ್ ರೈಲು, ಈ ಹಿಂದೆ 27.07.2026 ರವರೆಗೆ ಸಂಚರಿಸಲಿದೆ ಎಂದು ತಿಳಿಸಲಾಗಿತ್ತು. ಈಗ ಈ ರೈಲಿನ ಸೇವೆಯನ್ನು 03.08.2026 ರಿಂದ 31.08.2026 ರವರೆಗೆ ವಿಸ್ತರಿಸಲಾಗಿದೆ.

**ಹುಬ್ಬಳ್ಳಿ ರಾಮೇಶ್ವರಂ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲು**

ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿಯಂತ್ರಿಸಲು, ರೈಲ್ವೆ ಮಂಡಳಿಯು ರೈಲು ಸಂಖ್ಯೆ 07355/07356 ಎಸ್‌ಎಸ್‌ಎಸ್ ಹುಬ್ಬಳ್ಳಿ ರಾಮೇಶ್ವರಂ ಎಸ್‌ಎಸ್‌ಎಸ್ ಹುಬ್ಬಳ್ಳಿ ಸಾಪ್ತಾಹಿಕ ವಿಶೇಷ ಎಕ್ಸ್‌ಪ್ರೆಸ ರೈಲುಗಳ ಸೇವೆಯ ಅವಧಿಯನ್ನು ವಿಸ್ತರಿಸಲು ಅನುಮೋದನೆ ನೀಡಿದೆ.

